# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 178 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 28–01–2024 ಭಾನುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 178 | Title- Code: KARKAN 28269 | Chitradurga | Date: 28-01-2024 Sunday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಗಣತಂತ್ರ ದಿವಸ ಅದ್ದೂರಿ ಆಚರಿಸದಿರುವುದು ನೋವಿನ ಸಂಗತಿ 2

ದುರ್ಗದ ಪಾಳೇಗಾರರ ಸೇವೆ ಹಾಗೂ ತ್ಯಾಗ ಸರ್ವಕಾಲಕ್ಕೂ ಆದರ್ಶಮಯ 3

ಚಳ್ಳಕೆರೆ ಶಾಸಕ ಟಿ.ರಘುಮೂರ್ತಿಗೆ ಸಚಿವ ಸ್ಥಾನ ಕೊಡಲು ಒತ್ತಾಯ 4



ಸುದ್ದಿ, ಜಾಹಿರಾತಿಗೆ 9686622252


# ಶೋಷಿತ ಸಮಾವೇಶಕ್ಕೆ ಕೋಟೆನಾಡು ಸಿದ್ಧ

### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಫಾಸ್ಟ್ ನ್ಯೂಸ್

## ಸಿಎಂ ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ

ಚಿತ್ರದುರ್ಗ; ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ಜ. 28 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಮುಖ್ಯಮಂತ್ರಿಗಳು ಅಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ಹೆಚ್ಎಎಲ್ ವಿಮಾನ ನಿಲ್ದಾಣದಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಿಗ್ಗೆ 11 ಗಂಟೆಗೆ ನಗರದ ಎಸ್.ಜೆ.ಎಂ. ಆಂಗ್ಲ ಮಾಧ್ಯಮ ಶಾಲಾ ಆವರಣ ಪಕ್ಕದ ಹೆಲಿಪ್ಯಾಡ್‌ಗೆ ಆಗಮಿಸುವರು. ಬಳಿಕ ಶಿವಶರಣ ಮಾದಾರ ಚನ್ನಯ್ಯ ಗುರುಪೀಠಕ್ಕೆ ಭೇಟಿ ನೀಡುವರು. ಮಾದಾರ ಚೆನ್ನಯ್ಯ ಪೀಠದ ಪಕ್ಕದ ಮೈದಾನದಲ್ಲಿ ಶೋಷಿತ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಸಂಯುಕ್ತ ಆಶ್ರಯದ "ಶೋಷಿತ ಜಾಗೃತಿ ಸಮಾವೇಶ" ದಲ್ಲಿ ಭಾಗವಹಿಸುವರು.






ಚಿತ್ರದುರ್ಗ:ನಾಳೆ ನಡೆಯಲಿರುವ ಶೋಷಿತ ಸಮುದಾಯಗಳ ಬೃಹತ್ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸೇರಿದಂತೆ ಸಚಿವರುಗಳು ಭಾಗವಹಿಸಲಿದ್ದಾರೆ. ಈ ಸಮಾವೇಶದಲ್ಲಿ ಸುಮಾರು 5 ಲಕ್ಷ ಜನ ಸೇರುವ ನಿರೀಕ್ಷೆ ಇದೆ ಎಂದು ಶೋಷಿತ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ಕೆಎಂ ರಾಮಚಂದ್ರಪ್ಪ ತಿಳಿಸಿದರು.

ನಗರದ ಹೊರವಲಯದ ಸಮಾವೇಶ ನಡೆಯುವ ಸ್ಥಳದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಸಮಾವೇಶದಲ್ಲಿ ಸಿಎಂ ಡಿಸಿಎಂ, ಶೋಷಿತ ಸಮುದಾಯದ ಹಾಲಿ, ಮಾಜಿ ಸಚಿವರು, ಶಾಸಕರು ಸೇರಿದಂತೆ ರಾಜ್ಯದ ಪ್ರತೀ ಮೂಲೆ ಮೂಲೆಗಳಿಂದ ಜನತೆ, 10 ಸಾವಿರಕ್ಕೂ ಹೆಚ್ಚು ವಾಹನಗಳಲ್ಲಿ ಜನ ಬರುವ ನಿರೀಕ್ಷೆ ಇದೆ ಎಂದರು.ಕಾರ್ಯಕ್ರಮಕ್ಕೆ 5 ಲಕ್ಷ ಜನ ಸೇರುವ ನಿರೀಕ್ಷೆ ಇದ್ದು, 3 ಲಕ್ಷ ಜನತೆಗೆ ಆಸನ ವ್ಯವಸ್ಥೆ ಮಾಡಲಾಗಿದೆ. ಸಮಾವೇಶ ವೇದಿಕೆ ಮೇಲೆ 200 ಹೆಚ್ಚು ಆಸನ ವ್ಯವಸ್ಥೆ ಮಾಡಲಾಗಿದ್ದು, 3 ಲಕ್ಷಕ್ಕೂ ಅಧಿಕ ಜನರಿಗೆ ಊಟದ ವ್ಯವಸ್ಥೆ ಮಾಡಿದೆ. ಸಮಾವೇಶಕ್ಕೆ ಬರುವವರಿಗೆ ವೆಜ್ ಮತ್ತು ನಾನ್ ವೆಜ್ ಊಟ ಸಿದ್ದಪಡಿಸಲಾಗುತ್ತಿದೆ.ಈ ಸಮಾವೇಶದ ತರುವಾಯ ಶೋಷಿತರು ನಿರ್ಣಯ, ಸರಕಾರಕ್ಕೆ ಮನವಿ ಸಲ್ಲಿಸಲಿದ್ದೇವೆ. ಶೋಷಿತ ಸಮುದಾಯದ ಜನರಲ್ಲಿ ಜಾಗೃತಿ ಇಲ್ಲ, ಮೇಲ್ವರ್ಗದ ಜನರ ಗುಲಾಮಗಿರಿಗೆ ಒಳಗಾಗಿದ್ದಾರೆ. ಶೋಷಿತರನ್ನು ಗುಲಾಮಗಿರಿಯಿಂದ ಹೊರತರಬೇಕಾಗಿದೆ ಎಂದರು.

**ಎಂಪಿ ಚುನಾವಣೆಗೆ ಪ್ರತಿಕ್ರಿಯೆ :** ಲೋಕಸಭಾ ಚುನಾವಣೆ ದೃಷ್ಟಿಯಿಂದ ಈ ಸಮಾವೇಶ ಆಯೋಜನೆ ಮಾಡಲಾಗಿದೆ ಎಂಬ ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿದ ಅವರು ರಾಜ್ಯದಲ್ಲಿ ಕೆಲವರು ತಾವೇ ಸರಕಾರ ಮಾಡುವುದಾಗಿ ಹೇಳಿದ್ರು, ರಾಜ್ಯದಲ್ಲಿ ನಾವೂ ಇದೀವಿ ಅಂತಾ ಅವರಿಗೆ ತೋರಿಸಬೇಕು.ಜಾತಿ ಜನಗಣತಿ ವರದಿ ಜಾರಿ ಮುಖ್ಯ ಉದ್ದೇಶ ನಮ್ಮಜಾತಿ ಸದಸ್ಯರ ಸಂಖ್ಯೆ ನಿಖರವಾಗಿ ನಮಗೆ ಗೊತ್ತಾಗಬೇಕು. ಹಾಗಾಗಿ ಕಾಂತರಾಜ ವರದಿ ತ್ವರಿತವಾಗಿ ಜಾರಿ ಆಗಬೇಕು ಎಂದು ಸಮಾವೇಶ ಮೂಲಕ ಜಾರಿ ಆಗಬೇಕು ಅಂತಾ ಒತ್ತಡ ಹಾಕಲಾಗುವುದು. ದೇಶದಲ್ಲಿ ಸಂಪತ್ತು ಕೆಲವೇ ಕೆಲವು ಮೇಲ್ಜಾತಿಗಳಿಗೆ ಜಾತಿಗೆ ಸೀಮಿತವಾಗಿದೆ. ಕಾಂತರಾಜ್ ವರದಿ ಜಾರಿಯಾದ್ರೆ ಕೆಲವರಿಗೆ ಯಾಕೆ ನೋವು...? ಕಾಂತರಾಜ್ ವರದಿ ಜಾರಿ ಆಗಲೇಬೇಕು ಅಂತಾ ಒತ್ತಾಯ ಮಾಡ್ತೀವಿ ಎಂದರು.ಕೆಲವರು ಕಾಂತರಾಜ್ ವರದಿ ಕಳುವಾಗಿದೆ ಅಂತಿದಾರೆ. ಮಾಜಿ ಸಿಎಂ ಒಬ್ಬರು ಕಳುವಾಗಿದೆ ಅಂತಾ ಹೇಳಿದ್ದಾರೆ. ಆದ್ರೆ ನಮಗೆ ಅವರ ಮೇಲೇ ಸಂಶಯ ಇದೆ. ಎಲ್ಲಾ ಪಕ್ಷಗಳ ನಾಯಕರಿಗೂ ಸಮಾವೇಶಕ್ಕೆ ಆಹ್ವಾನ ಕೊಟ್ಟಿದೀವಿ, ಆದ್ರೆ ಅವರಿಗೆ ಬರೋಕೆ ಭಯ ಇರಬಹುದು ಎಂಧರು.ವಿರೋಧ ಪಕ್ಷದವರೆಲ್ಲ ನಾವೂ ಬೆಂಬಲ ಕೊಡ್ತೀವಿ ಅಂದಿದ್ದಾರೆ. ನಾವು ಯಾವುದೇ ರಾಜಕೀಯ ಪಕ್ಷಗಳಿಗೆ ಅಂಟಿಕೊಂಡಿಲ್ಲ. ಸಂಘಟನೆಗಳಿಂದ ನಾವಿಂದು ಹೋರಾಟ ಮಾಡುತ್ತಿದ್ದೇವೆ ಎಂದರು.ಚುನಾವಣೆಗೂ ಸಮಾವೇಶಕ್ಕೂ ಯಾವುದೇ ಸಂಬಂಧವಿಲ್ಲ, ಈಗಾಗಲೇ ರಾಜ್ಯಾದ್ಯಂತ ಓಡಾಡಿ ಶೋಷಿತರ ಸಂಘಟನೆ ಬಲಪಡಿಸಿದ್ದೇವೆ, ಸರ್ಕಾರದ ಸಂಪುಟ ಸಹೋದ್ಯೋಗಿಗಳು ವರದಿ ಸ್ವೀಕಾರದ ಬಗ್ಗೆ ನಕಾರ ಮಾಡ್ತಿದ್ದಾರೆ. ಹಾಗಾಗಿ ಅವರಿಗೂ ಚುರುಕುಮುಟ್ಟಿಸಲು ಈ ಸಮಾವೇಶ ಹಮ್ಮಿಕೊಳ್ಳಲಾಗಿದೆ.ಒಂದು ವೇಳೆ ವರದಿ ಸ್ವೀಕಾರಕ್ಕೆ ಇಷ್ಟ ಇರದಿದ್ರೆ ಸಮಾವೇಶದಲ್ಲಿ ಸ್ಪಷ್ಟಪಡಿಸಲಿ ಎಂದು ಆಗ್ರಹಿಸಿದರು.ಪತ್ರಿಕಾ ಘೋಷ್ಠಿಯಲ್ಲಿ ಹೋರಾಟಗಾರ ಅನಂತ್‌ನಾಯ್ಕ, ಸಂಚಾಲಕ .ಜಗದೀಶ್, ಮಾಜಿ ನಗರಸಭೆ ಅಧ್ಯಕ್ಷರಾದ ಮಂಜಪ್ಪ, ಸಿ.ಟಿ.ಕೃಷ್ಣಪ್ಪ, ಮೈಲಾರಪ್ಪ ರಘು ಅಂಜಿನಪ್ಪ, ದುರುಗೇಶ್, ಕುಮಾರಗೌಡ ಉಪಸ್ಥಿತರಿದ್ದರು.








## ಫಾಸ್ಟ್ ನ್ಯೂಸ್

### ಚಿತ್ರದುರ್ಗ ಲೋಕಸಭಾ ಕ್ಷೇತ್ರ ಉಸ್ತುವಾರಿಯಾಗಿ ಶಾಸಕ ಚನ್ನಬಸಪ್ಪ, ಸಂಚಾಲಕರಾಗಿ ಲಿಂಗಮೂರ್ತಿ ನೇಮಕ

» ಚಿತ್ರದುರ್ಗ





ಚಿತ್ರದುರ್ಗ ಲೋಕಸಭೆಗೆ ಬಿಜೆಪಿ ತಯಾರಿ ಆರಂಭಿಸಿದ್ದು, ರಾಜ್ಯದ ಎಲ್ಲ ಲೋಕಸಭಾ ಕ್ಷೇತ್ರಗಳ ಕುರಿತಂತೆ ಬೆಂಗಳೂರಿನಲ್ಲಿ ಇಂದು ಮೊದಲ ಸಭೆ ನಡೆದಿದೆ. ಇದಕ್ಕೂ ಮೊದಲು ಚಿತ್ರದುರ್ಗದಲ್ಲಿ ಜಿಲ್ಲಾ ಹಂತದಲ್ಲಿ ಒಂದು ಸುತ್ತಿನ ಸಭೆ ನಡೆದಿತ್ತು. ಈಗ ಮತ್ತೊಂದು ಹೆಜ್ಜೆ ಮುಂದೆ ಹೋಗಿ ಲೋಕಸಭೆಗೆ ಉಸ್ತುವಾರಿಗಳನ್ನು ನೇಮಕ ಮಾಡಲಾಗಿದೆ.ಶಿವಮೊಗ್ಗ ನಗರ ಶಾಸಕ ಚನ್ನಬಸಪ್ಪ ಅವರನ್ನು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಉಸ್ತುವಾರಿ ಹಾಗೂ ಖನಿಜ ನಿಗಮದ ಮಾಜಿ ಅಧ್ಯಕ್ಷ ಎಸ್.ಲಿಂಗಮೂರ್ತಿ ಅವರನ್ನು ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸಂಚಾಲಕರನ್ನಾಗಿ ನೇಮಕ ಮಾಡಿ ಆದೇಶ ಹೊರಡಿಸಿದೆ.ಬಿಜೆಪಿ ನೂತನ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಜ.27 ಶನಿವಾರ ರಾಜ್ಯದ ಎಲ್ಲ ಲೋಕಸಭಾ ಕ್ಷೇತ್ರಗಳಿಗೆ ಉಸ್ತುವಾರಿ ಹಾಗೂ ಸಂಚಾಲಕರನ್ನು ನೇಮಕ ಮಾಡಲಾಗಿದೆ.

### ಡಿಸಿಎಂ ಪ್ರವಾಸ

» ಚಿತ್ರದುರ್ಗ

ರಾಜ್ಯದ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರ ಜ. 28 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಪರಿಷ್ಕೃತಗೊಂಡಿದೆ. ಪರಿಷ್ಕೃತ ಪ್ರವಾಸ ಕಾರ್ಯಕ್ರಮದನ್ವಯ ಉಪಮುಖ್ಯಮಂತ್ರಿಗಳು ಅಂದು ಬೆಳಿಗ್ಗೆ ಕೊಪ್ಪಳದಿಂದ ಹೊರಟು, ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ನಂತರ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಪೀಠದ ಪಕ್ಕದ ಮೈದಾನದಲ್ಲಿ ಕರ್ನಾಟಕ ಶೋಷಿತ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಸಂಯುಕ್ತ ಆಶ್ರಯದ "ಶೋಷಿತ ಜಾಗೃತಿ ಸಮಾವೇಶ" ದಲ್ಲಿ ಭಾಗವಹಿಸುವರು. ಉಪಮುಖ್ಯಮಂತ್ರಿಗಳು ಅದೇ ದಿನ ಮಧ್ಯಾಹ್ನ 02 ಗಂಟೆಗೆ ರಸ್ತೆ ಮೂಲಕ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಉಪಮುಖ್ಯಮಂತ್ರಿಗಳ ಹೆಚ್ಚುವರಿ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

### ಸಚಿವ ಮುನಿಯಪ್ಪ ಪ್ರವಾಸ

» ಚಿತ್ರದುರ್ಗ

ರಾಜ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆ.ಹೆಚ್. ಮುನಿಯಪ್ಪ ಅವರು ಜ. 28 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಿಗ್ಗೆ ಬೆಂಗಳೂರಿನಿಂದ ಹೊರಟು, ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ಬಳಿಕ ಇಲ್ಲಿನ ಪ್ರವಾಸಿ ಮಂದಿರಕ್ಕೆ ತೆರಳುವರು. ಬೆಳಿಗ್ಗೆ 11 ಗಂಟೆಗೆ ನಗರದ ಹೊರವಲಯದಲ್ಲಿರುವ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಪೀಠದ ಪಕ್ಕದ ಮೈದಾನದಲ್ಲಿ ಕರ್ನಾಟಕ ಶೋಷಿತ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಸಂಯುಕ್ತ ಆಶ್ರಯದ "ಶೋಷಿತ ಜಾಗೃತಿ ಸಮಾವೇಶ" ದಲ್ಲಿ ಭಾಗವಹಿಸುವರು. ಸಚಿವರು ಅದೇ ದಿನ ಮಧ್ಯಾಹ್ನ 03 ಗಂಟೆಗೆ ಬೆಂಗಳೂರಿಗೆ ಪ್ರಯಾಣ ಬೆಳೆಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

### ಮಹದೇವಪ್ಪ ಪ್ರವಾಸ

» ಚಿತ್ರದುರ್ಗ

ರಾಜ್ಯ ಸಮಾಜ ಕಲ್ಯಾಣ ಸಚಿವರಾದ ಹೆಚ್.ಸಿ. ಮಹದೇವಪ್ಪ ಅವರು ಜ. 28 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಿಗ್ಗೆ ಬೆಂಗಳೂರಿನಿಂದ ಹೊರಟು, ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ಬಳಿಕ ನಗರದ ಹೊರವಲಯದಲ್ಲಿರುವ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಪೀಠದ ಪಕ್ಕದ ಮೈದಾನದಲ್ಲಿ ಕರ್ನಾಟಕ ಶೋಷಿತ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಸಂಯುಕ್ತ ಆಶ್ರಯದ "ಶೋಷಿತ ಜಾಗೃತಿ ಸಮಾವೇಶ" ದಲ್ಲಿ ಭಾಗವಹಿಸುವರು.

### ಸಚಿವ ತಂಗಡಗಿ ಪ್ರವಾಸ

» ಚಿತ್ರದುರ್ಗ

ರಾಜ್ಯ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರಾದ ಶಿವರಾಜ್ ಎಸ್. ತಂಗಡಗಿ ಅವರು ಜ. 28 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಿಗ್ಗೆ ಕೊಪ್ಪಳ ಜಿಲ್ಲೆ ಕಾರಟಗಿಯಿಂದ ಹೊರಟು, ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ಬಳಿಕ ನಗರದ ಹೊರವಲಯದಲ್ಲಿರುವ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಪೀಠದ ಪಕ್ಕದ ಮೈದಾನದಲ್ಲಿ ಕರ್ನಾಟಕ ಶೋಷಿತ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಸಂಯುಕ್ತ ಆಶ್ರಯದ "ಶೋಷಿತ ಜಾಗೃತಿ ಸಮಾವೇಶ" ದಲ್ಲಿ ಭಾಗವಹಿಸುವರು.

# ಗಣತಂತ್ರ ದಿವಸ ಅದ್ದೂರಿ ಆಚರಿಸದಿರುವುದು ನೋವಿನ ಸಂಗತಿ: ಮಾಜಿ ಸಚಿವ ಎಚ್.ಆಂಜನೇಯ

» ಚಿತ್ರದುರ್ಗ

ಇಡೀ ದೇಶದ ಸಮಗ್ರ ಅಭಿವರದ್ಧಿಗೆ ಸರ್ವಶ್ರೇಷ್ಠ ಸಂವಿಧಾನ ರಚಿಸಿ 75 ವರ್ಷ ಕಳೆದಿದೆ. ಇಂತಹ ಮಾಹನ್ ದಿನವನ್ನು ಕೇಂದ್ರ ಸರ್ಕಾರ ಅದ್ದೂರಿಯಾಗಿ ಆಚರಿಸದಿರುವುದು ಅತ್ಯಂತ ನೋವಿನ ಸಂಗತಿ ಎಂದು ಕೆಪಿಸಿಸಿ ಉಪಾಧ್ಯಕ್ಷ ಮಾಜಿ ಸಚಿವ ಎಚ್.ಆಂಜನೇಯ ಬೇಸರ ವ್ಯಕ್ತಪಡಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಶುಕ್ರವಾರ ನಡೆದ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸ್ವತಂತ್ರ ಭಾರತದ ಮೊದಲ ಪ್ರಧಾನಿ ಜವಹಾರ್ ಲಾಲ್ ನೆಹರೂರವರು ಭಾರತದ ಮೊದಲನೇ ಕಾನೂನು ಮಂತ್ರಿಯಾಗಿ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ನೇಮಕ ಮಾಡಿದರು. ಡಾ.ಬಿ.ಆರ್.ಅಂಬೇಡ್ಕರ್‌ವರು ತಮ್ಮ ಜವಬ್ದಾರಿಯನ್ನು ಅರಿತು ವಿವಿಧ ದೇಶಗಳನ್ನು ಸುತ್ತಿ ಅಲ್ಲಿನ ಕಾನೂನನ್ನು ಅಧ್ಯಯನ ಮಾಡಿ ಸರ್ವರ ಏಳಿಗೆಗೆ ಅವರ ಹಿತಾಸಕ್ತಿಯನ್ನು ಕಾಪಾಡಲಿಕ್ಕೆ ಯಾವ ಕಾನೂನು ಬೇಕು ಎಂಬುದನ್ನು ಅರಿತು ಇಡೀ ವಿಶ್ವವೇ ಮೆಚ್ಚುವಂತ ಒಂದು ಸಂವಿಧಾನವನ್ನು ರಚಿಸಿ, ಅರ್ಪಿಸಿ



ಇಂದಿಗೆ 75 ವರ್ಷ ಕಳೆಯಿತು. ಇಂತಹ ಮಹಾನ್ ಸಾಧನೆಯ ದಿನವನ್ನು ದೇಶದ ಪ್ರಧಾನಿಯವರು ರಾಮ ಮಂದಿರದ ಉದ್ಘಾಟನೆ ಯಾವ ರೀತಿ ಮಾಡಿದರೋ ಅದೇ ರೀತಿ ಅದ್ದೂರಿಯಾಗಿ ಆಚರಿಸಬೇಕಿತ್ತು. ಅದು ಮಾಡಲಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ದೇಶಕ್ಕೆ ಸ್ವತಂತ್ರ ಲಭಿಸಲು ಕಾರಣರಾದ ಮತ್ತು ದೇಶವನ್ನು ಅಭಿವೃದ್ಧಿಯತ್ತ ಸಾಗಲು ಕಾರಣರಾದ ಮಹಾತ್ಮಗಾಂಧಿ, ಪಂಡಿತ್ ಜವಹಾರ್ ಲಾಲ್ ನೆಹರು, ಲಾಲ್ ಬಹದೂರ್ ಶಾಸ್ತ್ರಿ, ಇಂದಿರಾಗಾಂಧಿಯವರನ್ನು ನೆನಪೇ ಇಲ್ಲದಂತಹ ಸ್ಥಿತಿ ನಿರ್ಮಾಣ ಮಾಡುತ್ತಿರುವುದು ದುಃಖಕರ ಎಂದರು.

ಬ್ರಿಟೀಷರು 300 ವರ್ಷಗಳ ಕಾಲ ಈ ರಾಷ್ಟ್ರವನ್ನು ಆಳ್ವಿಕೆ ನಡೆಸಿ ನಮ್ಮ ಸಂಪತ್ತನ್ನೆಲ್ಲ ದೋಚಿಕೊಂಡು ಹೋದರು. ಗುಲಾಮಗಿರಿಗೆ ಒಳಪಟ್ಟಿದ್ದ ಜನರನ್ನು ಬಿಡುಗಡೆಗೊಳಿಸಲು ಮಹಾತ್ಮಗಾಂಧಿ ಅವರ ನೇತೃತ್ವದಲ್ಲಿ ಚಳವಳಿ ನಡೆದಿದ್ದರಿಂದ ನಮಗೆ ಸ್ವಾತಂತ್ರ್ಯ ಲಭಿಸಿತು.

ಸ್ವತಂತ್ರ ಭಾರತದ ಪ್ರಥಮ ಪ್ರಧಾನಿ ಜವಹಾರ್ ಲಾಲ್ ನೆಹರು ಅವರು ಪ್ರಧಾನಮಂತ್ರಿ ಆದ ಸಮಯದಲ್ಲಿ ಉಡುವ ಬಟ್ಟೆ ಹರಿದರೆ ಅದನ್ನು ಹೊಲಿಗೆ ಹಾಕಿಸುವ ಯಂತ್ರವೂ ಸೇರಿದಂತೆ ವಿಮಾನ, ಸುಸಜ್ಜಿತ ರಸ್ತೆಯೂ ನಮ್ಮಲ್ಲಿ ಇರಲಿಲ್ಲ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಪಂಚವಾರ್ಷಿಕ ಯೋಜನೆಗಳನ್ನು ಜಾರಿಗೆ ತಂದು ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ ಸದೃಢ ಭಾರತದ ನಿರ್ಮಾಣಕ್ಕೆ ನಾಂದಿ ಹಾಡಿದರು ಎಂದು ನೆನಪಿಸಿದರು.

ಸ್ವತಂತ್ರ ಮಾಡುವ ಚಳವಳಿಯಲ್ಲಿ ಬ್ರಿಟೀಷರ ಗುಂಡಿಗೆ ಎದೆಗೊಡುವ ಸಮಯದಲ್ಲಿ ಇವರು ಪರಿಶಿಷ್ಟ ಜಾತಿ, ಪಂಗಡದವರು, ಮುಸ್ಲಿಮರು, ಹಿಂದೂ, ಸಿಖ್ಖರು ಎನ್ನುವುದನ್ನು ನೋಡಲಿಲ್ಲ. ನಮಗೆ ಭಾರತ ಬ್ರಿಟೀಷರ ಸಂಕೋಲೆಯಿಂದ ಮುಕ್ತಿ ಹೊಂದಿ ಸ್ವತಂತ್ರ ಆಗಬೇಕು.ಬ್ರಿಟಿಷರು ನಮ್ಮ ದೇಶವನ್ನು ಬಿಟ್ಟು ತೊಲಗಬೇಕು ಎನ್ನುವ ಸಂಕಲ್ಪದಿಂದ ನಮ್ಮ ಪೂಜ್ಯರ ಹೋರಾಟ ಮತ್ತು ತ್ಯಾಗದ ಫಲವಾಗಿ ಸ್ವತಂತ್ರ ಸಿಕ್ಕಿದೆ ಎಂದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ. ತಾಜ್ ಪೀರ್, ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಸಂಪತ್ ಕುಮಾರ್, ವಿಧಾನಪರಿಷತ್ ಮಾಜಿ ಸದಸ್ಯೆ ಜಯಮ್ಮ ಬಾಲರಾಜ್, ಜಿಲ್ಲಾ ಮಾಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತಾ ನಂದಿನಿಗೌಡ, ಜಿಪಂಮಾಜಿ ಸದಸ್ಯ ಆರ್.ನರಸಿಂಹರಾಜು, ಸಂಪತ್ ಕುಮಾರ್ ಮತ್ತಿತರರಿದ್ದರು.

# ಅಲೆಮಾರಿ, ಅರೆಅಲೆಮಾರಿ ಜನಾಂಗಕ್ಕೆ ಭೂಮಿ ಮತ್ತು ವಸತಿ ಸೌಲಭ್ಯ ಒದಗಿಸಿ

» ಚಿತ್ರದುರ್ಗ

ವಾಸಿಸಲು ಸ್ವಂತ ಮನೆಗಳಿಲ್ಲದೆ ಅಲೆಮಾರಿ, ಅರೆಅಲೆಮಾರಿ ಜನಾಂಗ ಟೆಂಟ್‌ಗಳಲ್ಲಿ ಜೀವನ ಸಾಗಿಸುತ್ತಿದ್ದು, ಭೂ ಒಡೆತನ ಸ್ಕೀಂ ಜಾರಿಗೆ ತರುವ ಮೂಲಕ ರಾಜ್ಯ ಸರ್ಕಾರ ವಸತಿ ಸೌಲಭ್ಯ ಒದಗಿಸಬೇಕೆಂದು ಅಲೆಮಾರಿ ಸಂಘಟನೆ ಜಿಲ್ಲಾಧ್ಯಕ್ಷ ನಾಗರಾಜು ಕೆ.ಎಂ. ಒತ್ತಾಯಿಸಿದರು.

ಪತ್ರಕರ್ತರ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು 2016–17 ರಲ್ಲಿ ಅಲೆಮಾರಿ ಕೋಶವನ್ನು ರಚಿಸಿದ ರಾಜ್ಯ ಸರ್ಕಾರ 102 ಕೋಟಿ ರೂ.ಗಳನ್ನು ಬಜೆಟ್‌ನಲ್ಲಿ ಮೀಸಲಿಟ್ಟಿತ್ತು. 72 ಜಾತಿಗಳು ಅಲೆಮಾರಿ ಮತ್ತು ಅರೆಅಲೆಮಾರಿ ಜನಾಂಗಕ್ಕೆ ಸೇರ್ಪಡೆಯಾದ ನಂತರ ಕೊರಚ, ಕೊರಮ ಜನಾಂಗವನ್ನು ಅಲೆಮಾರಿ ಅರೆಅಲೆಮಾರಿ ಜನಾಂಗಕ್ಕೆ ಸೇರಿಸಿತೆ ವಿನಃ ಜನಸಂಖ್ಯೆಗನುಗುಣವಾಗಿ ಅನುದಾನ ಹೆಚ್ಚಿಸಲಿಲ್ಲ. ರಾಜ್ಯದಲ್ಲಿ ಎರಡರಿಂದ ನಾಲ್ಕು ಲಕ್ಷದಷ್ಟು ಅಲೆಮಾರಿಗಳಿದ್ದು, ಸಂಕಷ್ಟದಲ್ಲಿ ಜೀವಿಸುತ್ತಿದ್ದಾರೆ. ನಿರ್ಧಿಷ್ಟವಾದ ಸ್ಥಳವಿಲ್ಲ. ರಾಜ್ಯ ಸರ್ಕಾರ ಅಲೆಮಾರಿ, ಅರೆಅಲೆಮಾರಿಗಳ ಸಂಕಷ್ಟವನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಮನವಿ ಮಾಡಿದರು.ಕೊರಚ ಜನಾಂಗದ ಜಿಲ್ಲಾಧ್ಯಕ್ಷ ವೈ.ಕುಮಾರ್ ಮಾತನಾಡಿ 2011 ರ ಜಾತಿಗಣತಿಯನ್ನುಮಾನದಂಡವಾಗಿಟ್ಟುಕೊಂಡು ರಾಜ್ಯ ಸರ್ಕಾರ ಅಲೆಮಾರಿ ಮತ್ತು ಅರೆಅಲೆಮಾರಿಗಳನ್ನು ವಂಚಿಸುತ್ತ ಬರುತ್ತಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಜಾತಿ ಗಣತಿಯನ್ನು ಮುಚ್ಚಿಡಬಾರದು. ಬಹಿರಂಗಪಡಿಸಬೇಕು. ಶೈಕ್ಷಣಿಕ, ಸಾಮಾಜಿಕ,



ಆರ್ಥಿಕ, ರಾಜಕೀಯವಾಗಿ ಹಿಂದುಳಿದಿರುವ ಈ ಜನಾಂಗಕ್ಕೆ ಸರ್ಕಾರ ವಸತಿ ಸೌಲಭ್ಯ ನೀಡಲಿ ಎಂದು ಆಗ್ರಹಿಸಿದರು.

ಅಲಕ್ಷಿತ ಸಮುದಾಯಗಳ ಒಕ್ಕೂಟದ ಅಧ್ಯಕ್ಷ ತಿಪ್ಪೇಸ್ವಾಮಿ ಸಂಪಿಗೆ ಮಾತನಾಡುತ್ತ ಅಲೆಮಾರಿ ಮತ್ತು ಅರೆಅಲೆಮಾರಿಗಳಿಗೆ ಶಾಶ್ವತ ನೆಲೆ ಬೇಕಾಗಿದೆ. ಎಲ್ಲಿ ಐವತ್ತು ಕುಟುಂಬಗಳು ವಾಸಿಸುತ್ತಿವೆಯೋ ಅಂತಹ ಪ್ರದೇಶವನ್ನು ಗುರುತಿಸಿ ಪ್ರತ್ಯೇಕ ಕಾಲೋನಿಯನ್ನಾಗಿಸಬೇಕು. ಮೂಲಭೂತ ಸೌಲಭ್ಯಗಳು ಸರ್ಕಾರದಿಂದ ಸಿಕ್ಕಾಗ ಮಾತ್ರ ಈ ಜನಾಂಗ ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯ ಎಂದು ಹೇಳಿದರು.ಸುಡುಗಾಡುಸಿದ್ದಜನಾಂಗದಜಿಲ್ಲಾಧ್ಯಕ್ಷ ಕೃಷ್ಣಪ್ಪ ಮಾತನಾಡಿ ವಸತಿಗಾಗಿ ಹಿಂದಿನಿಂದಲೂ ಹೋರಾಟ ಮಾಡಿಕೊಂಡು ಬರುತ್ತಿದ್ದೇವೆ. ನಮ್ಮ ಜನಾಂಗದಲ್ಲಿನ ಸಮಸ್ಯೆಗಳನ್ನು ಕೇಳಲು ಯಾರು ಶಾಸಕರಾಗಲಿ, ಸಂಸದರಾಗಲಿ ಇಲ್ಲ. ಶೋಷಿತ ವರ್ಗಕ್ಕೆ ಸೇರಿದ ನಮ್ಮನ್ನು ಹೇಳುವವರು ಕೇಳುವವರೆ ಇಲ್ಲದಂತಾಗಿದ್ದಾರೆ. ಅಹಿಂದ ನಾಯಕ ಎಂದು ಹೇಳಿಕೊಳ್ಳುತ್ತಿರುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಶಾಶ್ವತ ನೆಲೆ ಒದಗಿಸಲಿ ಎಂದು ವಿನಂತಿಸಿದರು.ಕರ್ನಾಟಕ ಶಾಂತಿ ಮತ್ತು ಸೌಹಾರ್ಧ ವೇದಿಕೆ ಅಧ್ಯಕ್ಷ ನರೇನಹಳ್ಳಿ ಅರುಣ್‌ಕುಮಾರ್ ಮಾತನಾಡುತ್ತ ಅಲೆಮಾರಿ ಮತ್ತು ಅರೆಅಲೆಮಾರಿ ಸಮುದಾಯ ಜಿಲ್ಲೆಯಲ್ಲಿ ಐವತ್ತು ಸಾವಿರಕ್ಕೂ ಹೆಚ್ಚಿನ ಸಂಖ್ಯೆಯಲ್ಲಿದ್ದು, ಮೂಲಭೂತ ಸೌಲಭ್ಯಗಳಿಂದ ಮೊದಲಿನಿಂದಲೂ ವಂಚಿತವಾಗಿದೆ. ಭೂಮಿ, ವಸತಿ, ಶಿಕ್ಷಣ, ಸಾಮಾಜಿಕ ಸ್ಥಾನಮಾನ, ರಾಜಕೀಯದಲ್ಲಿ ಅಧಿಕಾರ ಯಾವುದು ಸಿಕ್ಕಿಲ್ಲ. ಸರ್ಕಾರ ಅಲೆಮಾರಿ ಅರೆಅಲೆಮಾರಿಗಳ ಬೇಡಿಕೆಗಳನ್ನು ಕೂಡಲೆ ಈಡೇರಿಸಬೇಕೆಂದು ಮನವಿ ಮಾಡಿದರು. ಸಿಳ್ಳೆಕ್ಯಾತ ಮುಖಂಡ ಮಾರಿಕಾಂಬ ಕೃಷ್ಣಪ್ಪ, ಚನ್ನದಾಸ ಜನಾಂಗದ ಅಧ್ಯಕ್ಷ ರಂಗಪ್ಪ, ಜಯಣ್ಣ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

## ಗಣರಾಜ್ಯೋತ್ಸವ ಭಾರತೀಯರ ಸ್ವಾಭಿಮಾನದ ಸಂಕೇತ: ಕೃಷ್ಣಪ್ರಸಾದ್



» ಚಳ್ಳಕೆರೆ

ರಾಷ್ಟ್ರದ ಗಣರಾಜ್ಯೋತ್ಸವ ಸಂಭ್ರಮದ ಕಾರ್ಯಕ್ರಮವಾದರೂ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಿ ತಮ್ಮ ಪ್ರಾಣವನ್ನೇ ಬಲಿದಾನ ಮಾಡಿದ ಅನೇಕ ಮಹಾನೀರು ನಮ್ಮಲ್ಲಿದ್ದಾರೆ. ಅವರ ಹೋರಾಟದ ಪರಿಶ್ರಮದ ಫಲವಾಗಿ ಇಂದು ನಾವು ಈ ಕಾರ್ಯಕ್ರಮವನ್ನು ಆಚರಿಸಲು ಸಾಧ್ಯವಾಗಿದೆ. ವಿದ್ಯಾರ್ಥಿಗಳು ದೇಶಸೇವೆಯ ಕಾರ್ಯದಲ್ಲಿ ಮುಂದಾಗಬೇಕೆಂದು ಸಮಾಜ ಸೇವಕ ನವೀನ್‌ಸುಬ್ರಮಣ್ಯ ತಿಳಿಸಿದರು. ಅವರು, ನಗರದ ಬೆಂಗಳೂರು ರಸ್ತೆಯಲ್ಲಿರುವ ಎಸ್‌ಆರ್‌ಎಸ್ ವಿದ್ಯಾಸಂಸ್ಥೆ ಆವರಣದಲ್ಲಿ ಹಮ್ಮಿಕೊಂಡಿದ್ದ 75ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದರು. ದೇಶದ ಬಗ್ಗೆ ಭಕ್ತಿಗೌರವವನ್ನು ಎಲ್ಲರೂ ಹೊಂದಬೇಕು. ಇತ್ತೀಚಿನ ದಿನಗಳಲ್ಲಿ ದೇಶದ ಬಗ್ಗೆ ನಮಗೆ ಇರುವ ಶ್ರದ್ದೆ, ವಿಶ್ವಾಸದಲ್ಲಿ ಕೊರತೆ ಉಂಟಾಗುತ್ತಿದೆ. ಇದರಿಂದ ಎಲ್ಲರೂ ಜಾಗೃತರಾಗಬೇಕು ಎಂದರು.

ಆಡಳಿತಾಧಿಕಾರಿ ಪಿ.ಎನ್.ಕೃಷ್ಣಪ್ರಸಾದ್ ಮಾತನಾಡಿ, ನಾವೆಲ್ಲರೂ ಭಾರತಮಾತೆಯ ಹೆಮ್ಮೆಯ ಮಕ್ಕಳು. ನಾವು ಇಂದು ಎಲ್ಲಾ ರೀತಿಯ ಉತ್ತಮ ಬದುಕನ್ನು ನಡೆಸುತ್ತಿದ್ದು, ಇದಕ್ಕೆ ನಮ್ಮಗಾಗಿ ಹೋರಾಡಿದ ನಮ್ಮ ಸೈನಿಕರು ಹಾಗೂ ಸ್ವಾತಂತ್ರ್ಯ ಹೋರಾಟಗಾರರ ಶೌರ್ಯ, ತ್ಯಾಗ, ಬಲಿದಾನವನ್ನು ನಿತ್ಯ ಸ್ಮರಿಸಬೇಕು. ಗಣರಾಜ್ಯೋತ್ಸವ ಭಾರತೀಯರ ಸ್ವಾಭಿಮಾನದ ಸಂಕೇತ ಎಂದರು.

ಇದೇ ಸಂದರ್ಭದಲ್ಲಿ ಶಾಲೆಯ ವಿದ್ಯಾರ್ಥಿಗಳೆಲ್ಲರೂ ಸೇರಿ 13501ರೂ ಹಣವನ್ನು ಸೈನಿಕರ ಪರಿಹಾರ ನಿಧಿಗೆ ದೇಣಿಗೆ ನೀಡುವ ಮೂಲಕ ತಮ್ಮ ರಾಷ್ಟ್ರಭಕ್ತಿಯನ್ನು ಪ್ರದರ್ಶಿಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಬಿ.ಎಲ್.ಅಮೋಘ್, ಪ್ರಾಂಶುಪಾಲ ಬಿ.ಎಸ್.ವಿಜಯ್, ಸತ್ಯನಾರಾಯಣ ಮುಂತಾದವರು ಭಾಗವಹಿಸಿದ್ದರು.







ಬೆಂಗಳೂರಿನಲ್ಲಿ ರಾಜ್ಯಮಟ್ಟದ ಗಣರಾಜ್ಯೋತ್ಸವದ ಪ್ರಯುಕ್ತ "ಫ್ರೀಡಂ ಪಾರ್ಕ್‌ನಲ್ಲಿ" ಅಂಜನ ನೃತ್ಯ ಕಲಾ ಕೇಂದ್ರದ ವತಿಯಿಂದ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

## ಪ್ರಮುಖ ಸುದ್ದಿ

ಕಾಂಗ್ರೆಸ್ ಸರ್ಕಾರ ಆಡಳಿತದಲ್ಲಿ ಲಕ್ಷಾಂತರ ಕಾರ್ಮಿಕರ ಬದುಕು ಡೋಲಾಯಮಾನ : ಸಿ.ವೈ.ಶಿವರುದ್ರಪ್ಪ

# ಸುಳ್ಳು ಭರವಸೆ ನೀಡಿದ ಕಾಂಗ್ರೆಸ್‌ನ ಪ್ರಿಯಾಂಕಗಾಂಧಿ

» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ರಾಜ್ಯ ಸರ್ಕಾರದ ವಿರುದ್ದ ತಮ್ಮ ಮೂಲಭೂತ ಬೇಡಿಕೆಗಳ ಈಡೇರಿಕೆಗಾಗಿ ನಿರಂತರವಾಗಿ ಹೋರಾಟ ಮಾಡುತ್ತಾ ಬಂದಿರುವ ಎಐಟಿಯುಸಿ ನೇತೃತ್ವದ ಕಾರ್ಮಿಕ ಸಂಘಟನೆವತಿಯಿಂದ ಫೆ.1ರಂದು ಬೆಂಗಳೂರಿನ ಫ್ರೀಡಂಪಾರ್ಕ್‌ನಲ್ಲಿ ಪ್ರತಿಭಟನೆ ಹಾಗೂ ಬಹಿರಂಗ ಅಧಿವೇಶನವನ್ನು ಹಮ್ಮಿಕೊಂಡಿದ್ದು, ರಾಜ್ಯದ ಮುಖ್ಯಮಂತ್ರಿಗಳಿಗೆ ಬೇಡಿಕೆಗಳ ಈಡೇರಿಸುವಂತೆ ಒತ್ತಾಯಿಸುವ ಜೊತೆಗೆ, ಬಜೆಟ್‌ನಲ್ಲಿ ಹೆಚ್ಚು ಅನುದಾನ ಒದಗಿಸುವಂತೆ ಆಗ್ರಹಿಸಲಾಗುವುದು ಎಂದು ಎಐಟಿಯುಸಿ ರಾಜ್ಯ ಸಂಚಾಲಕ ಸಿ.ವೈ.ಶಿವರುದ್ರಪ್ಪ ತಿಳಿಸಿದ್ದಾರೆ.



ನಗರದ ಪ್ರವಾಸಿ ಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ರಾಜ್ಯ ಸರ್ಕಾರ ಕಾರ್ಮಿಕ ವಿರೋಧಿ ನೀತಿಯನ್ನುಅನುಸರಿಸುತ್ತಲೇ ಬಂದಿದೆ. ಕಾರ್ಮಿಕರಿಗೆ ನೀಡಿದ ಯಾವುದೇ ಭರವಸೆ ಈಡೇರಿಲ್ಲ, ವಿಶೇಷವಾಗಿ ಬಿಸಿಯೂಟ, ಅಂಗನವಾಡಿ, ಆಶಾ ಮುಂತಾದ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವ ಲಕ್ಷಾಂತರ ಮಹಿಳೆಯರಿಗೆ ಚುನಾವಣಾ ಸಂದರ್ಭದಲ್ಲಿ ಎಐಸಿಸಿ ಪ್ರಭಾವಿನಾಯಕಿ ಪ್ರಿಯಾಂಕಗಾಂಧಿ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ನಿಮ್ಮೆಲ್ಲ ಭೇಡಿಕೆ ಈಡೇರಿಸುವ ಭರವಸೆ ನೀಡಿದ್ದರು. ಆದರೆ, ಎಂಟು ತಿಂಗಳ ಆಡಳಿತದಲ್ಲಿ ಒಮ್ಮೆಯೂ ಸಹ ಈ ಬಗ್ಗೆ ಮುಖ್ಯಮಂತ್ರಿ ಚರ್ಚಿಸಿಲ್ಲ, ಪ್ರಿಯಾಂಕಗಾಂಧಿಯೂ ಸಹ ಕೊಟ್ಟ ವಚನ ಮರೆತಿದ್ದಾರೆಂದು ಅಸಮದಾನ ವ್ಯಕ್ತಪಡಿಸಿದರು.

ಎಐಸಿಸಿ ಜಿಲ್ಲಾ ಸಂಚಾಲಕ ದೊಡ್ಡ ಉಳ್ಳಾರ್ತಿ ಕರಿಯಣ್ಣ ಮಾತನಾಡಿ, ರಾಜ್ಯದಲ್ಲಿ ಸುಮಾರು ಎರಡು ಕೋಟಿ ಕಾರ್ಮಿಕರು ವಿವಿಧ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ. ಕಟ್ಟಡ, ಸಾರಿಗೆ, ಕೈಗಾರಿಕೆ, ಪ್ಲಾಟೇಷನ್, ಗಣಿ ಮುಂತಾದ ಕಡೆಗಳಲ್ಲಿ ಕಾರ್ಮಿಕರು ಹೆಚ್ಚು ಶ್ರಮವಹಿಸಿ, ಪ್ರಾಮಾಣಿಕವಾಗಿ ಕೆಲಸ ನಿರ್ವಹಿಸುತ್ತಿದ್ದಾರೆ. ಇತ್ತಿಚೆಗೆ ಸರ್ಕಾರ ಎಂಟು ಗಂಟೆ ಬದಲಿ 12 ಗಂಟೆ ಕಾರ್ಯನಿರ್ವಹಿಸುವಂತೆ ಕಾರ್ಮಿಕರ ಮೇಲೆ ನಿಬಂಧನೆ ಹೇರಿದೆ. ಆದರೆ, ಯಾವುದೇ ಸೌಲಭ್ಯ ಕೊಡಲು ಸರ್ಕಾರ ಸಿದ್ದವಿಲ್ಲ. ಜಿಲ್ಲೆಯಲ್ಲಿ ಸುಮಾರು 30 ಸಾವಿರಕ್ಕೂ ಹೆಚ್ಚು ಕಾರ್ಮಿಕರಿದ್ದು, 10 ಸಾವಿರ ಕಾರ್ಮಿಕರು ತಮ್ಮ ಸ್ವತಃ ವೆಚ್ಚದಲ್ಲಿ ಪ್ರತಿಭಟನೆಗೆ ಆಗಮಿಸುವರು. ಜಿಲ್ಲೆಯ ಎಲ್ಲಾ ವರ್ಗದ ಕಾರ್ಮಿಕರು ಬೆಂಗಳೂರಿನ ಪ್ರತಿಭಟನೆಗೆ ಹಾಜರಾಗುಂತೆ ಮನವಿ ಮಾಡಿದರು. ಕಾರ್ಮಿಕ ಮುಖಂಡ ದುಗ್ಗಾವರಶಿವಣ್ಣ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಸಚಿವ ಸತೀಶ್ ಜಾರಕಿಹೊಳಿ ಅವರ ಪ್ರವಾಸ ಕಾರ್ಯಕ್ರಮ

» ಚಿತ್ರದುರ್ಗ



ರಾಜ್ಯ ಲೋಕೋಪಯೋಗಿ ಸಚಿವರಾದ ಸತೀಶ್ ಜಾರಕಿಹೊಳಿ ಅವರು ಜ. 28 ರಂದು ಚಿತ್ರದುರ್ಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ. ಸಚಿವರು ಅಂದು ಬೆಳಿಗ್ಗೆ ಉಡುಪಿ ಜಿಲ್ಲೆ ಕುಂದಾಪುರದಿಂದ ಹೆಲಿಕಾಪ್ಟರ್ ಮೂಲಕ ಹೊರಟು, ಮಧ್ಯಾಹ್ನ 12. 05 ಗಂಟೆಗೆ ಚಿತ್ರದುರ್ಗ ನಗರಕ್ಕೆ ಆಗಮಿಸುವರು. ಬಳಿಕ ನಗರದ ಹೊರವಲಯದಲ್ಲಿರುವ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಪೀಠದ ಪಕ್ಕದ ಮೈದಾನದಲ್ಲಿ ಕರ್ನಾಟಕ ಶೋಷಿತ ಮಹಾ ಒಕ್ಕೂಟ ಮತ್ತು ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ಸಂಯುಕ್ತ ಆಶ್ರಯದ "ಶೋಷಿತ ಜಾಗೃತಿ ಸಮಾವೇಶ" ದಲ್ಲಿ ಭಾಗವಹಿಸುವರು ಎಂದು ಸಚಿವರ ಆಪ್ತ ಕಾರ್ಯದರ್ಶಿ ತಿಳಿಸಿದ್ದಾರೆ.

### ಆದರ್ಶ ವಿದ್ಯಾಲಯ: 6ನೇ ತರಗತಿ ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಲು ಫೆ.6ರ ಕಡೆದಿನಾಂಕ

» ಚಳ್ಳಕೆರೆ

ಚಳ್ಳಕೆರೆ ನಗರದ ಪಾವಗಡ ರಸ್ತೆಯಲ್ಲಿರುವ ಆದರ್ಶ ವಿದ್ಯಾಲಯದ 2024–25ನೇ ಸಾಲಿನ 6ನೇ ತರಗತಿ ಪ್ರವೇಶಕ್ಕಾಗಿ ಅರ್ಜಿಗಳನ್ನು ಆಹ್ವಾನಿಸಿದ್ದು, ಪ್ರಸ್ತುತ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಫೆಬ್ರವರಿ–6ರ ಸಂಜೆ 5ರೊಳಗೆ ಅರ್ಜಿಗಳನ್ನು ಸಲ್ಲಿಸಲು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಸೂಚಿಸಿದ್ದಾರೆ. ಅರ್ಜಿಗಳನ್ನು ಸಲ್ಲಿಸಿದ ನಂತರ ಮಾರ್ಚ್–3ರ ಭಾನುವಾರ ಬೆಳಗ್ಗೆ 10.30ರಿಂದ 1ರವರೆಗೆ ವಿದ್ಯಾರ್ಥಿಗಳಿಗೆ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುವುದು. ಟಿ.ಅಶೋಕರೆಡ್ಡಿ ಮಾಹಿತಿ ನೀಡಿ, ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಿ ಜೆರಾಕ್ಸ್ ಪ್ರತಿಯನ್ನು ಕಡ್ಡಾಯವಾಗಿ ಮುಖ್ಯೋಪಾಧ್ಯಾಯರು ಆದರ್ಶ ವಿದ್ಯಾಲಯ ಇವರಿಗೆ ತಲುಪಿಸಲು ಕೋರಿದೆ. ಹೆಚ್ಚಿನ ಮಾಹಿತಿಗೆ ಮುಖ್ಯೋಪಾಧ್ಯಾಯರು ಆದರ್ಶ ವಿದ್ಯಾಲಯ–96862 37507 ಸಂಪರ್ಕಿಸಲು ಮನವಿ ಮಾಡಿದೆ.

### ತಿಮ್ಮಪ್ಪಯ್ಯನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ 75ನೇ ಗಣರಾಜ್ಯೋತ್ಸವ ಆಚರಣೆ



» ನಾಯಕನಹಟ್ಟಿ

ನಾವು ನಮ್ಮ ಸಂವಿಧಾನವನ್ನು ಗೌರವಿಸಬೇಕು ಅದರಲ್ಲಿರುವ ನಿಯಮಗಳನ್ನು ಅನುಸರಿಸಬೇಕು ಮೂಲಭೂತ ಹಕ್ಕುಗಳಂತೆ ದೇಶದ ಪ್ರಜೆಗಳಾಗಿ ಇದರಲ್ಲಿ ನೀಡಲಾದ ಮೂಲಭೂತ ಕರ್ತವ್ಯಗಳನ್ನೂ ಸಹ ಪಾಲಿಸಬೇಕು ಎಂದು ತಿಮ್ಮಪ್ಪಯ್ಯನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಅನಿತರವಿಕುಮಾರ್ ಹೇಳಿದರು.ಹೋಬಳಿಯ ತಿಮ್ಮಪ್ಪಯ್ಯನಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ 75ನೇ ವರ್ಷದ ಗಣರಾಜ್ಯೋತ್ಸವವನ್ನು ಧ್ವಜರೋಹಣ ಮಾಡುವ ಮೂಲಕ ನಂತರ ಮಾತನಾಡಿದ ಅವರು ಗಣರಾಜ್ಯೋತ್ಸವದ ದಿನ ಪ್ರತಿಯೊಬ್ಬ ದೇಶದ ಪ್ರಜೆಯು ಹೆಮ್ಮೆಪಡುದ ದಿನವಾಗಿದೆ. ಭಾರತದ ಇತಿಹಾಸದಲ್ಲಿ ಗಣರಾಜ್ಯೋತ್ಸವದ ದಿನ ಮಹತ್ವದ ದಿನವಾಗಿದೆ. ಈ ದಿನದಂದು ಇಡೀ ದೇಶವೆ ಸಂಭ್ರಮಿಸುತ್ತದೆ. ಡಾ|| ಬಿ.ಆರ್. ಅಂಬೇಡ್ಕರ್ ನಮ್ಮ ದೇಶದ ಮಹಾನಾಯಕರು ನಿರಂತರವಾಗಿ ವಂಚಿತ ಜನರ ಪರವಾಗಿ ಹೋರಾಡಿದರು. ನಾನು ಒಬ್ಬ ಗ್ರಾಮ ಪಂಚಾಯಿತಿ ಅಧ್ಯಕ್ಷೆಯಾಗಲು ಅವರು ಬರೆದ ಸಂವಿಧಾನದಿಂದ ಭಾರತದಲ್ಲಿ ಸಂವಿಧಾನ ಜಾರಿಗೆ ಬಂದ ಕಾರಣದಿಂದಲೇ ದೇಶದ ಪ್ರತಿಯೊಬ್ಬ ಪ್ರಜೆಯೂ ಸಹ ಸಾಮಾನ್ಯ ಶಿಕ್ಷಣ ಪ್ರತಿಯೊಬ್ಬರಿಗೂ ಬೇಕಾದ ಮೂಲಭೂತ ಹಕ್ಕುಗಳು, ಧಾರ್ಮಿಕ ಹಕ್ಕುಗಳು ಇವೆಲ್ಲವೂ ಸಹ ಸಿಕ್ಕಿವೆ. ಇದೊಂದು ಬೃಹತ್ ಸಂವಿಧಾನವಾಗಿದ್ದು ಇದರ ಜಾರಿಗೆ ಮಹತ್ವದ ಕೊಡುಗೆ ನೀಡಿದವರು ಡಾ|| ಬಿ.ಆರ್. ಅಂಬೇಡ್ಕರ್‌ರವರು ಎಂದು ಮಾತನಾಡಿದರು.ಈ ಸಂದರ್ಭದಲ್ಲಿ ಉಪಸ್ಥಿತರಾದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀನಿವಾಸ್, ಗ್ರಾಮ ಪಂಚಾಯಿತಿ ಸದಸ್ಯರುಗಳು, ಉಪಾಧ್ಯಕ್ಷರು, ಮಾಜಿ ಅಧ್ಯಕ್ಷರು ಕರಿಯಣ್ಣ, ನೌಕರರು, ಸಿಬ್ಬಂದಿ ವರ್ಗ, ಕಾರ್ಯದರ್ಶಿ ನಾಗರಾಜ್‌ನಾಯ್ಕ, ಆಯುರ್ವೇದಿಕ್ ವೈದ್ಯಾಧಿಕಾರಿ ಡಾ|| ಸರಸ್ವತಿ, ಸಂತೋಷ್, ಗ್ರಂಥಪಾಲಕರು, ಇಂಜಿನಿಯರ್ ಪಾಲಯ್ಯ, ತಿಪ್ಪೇಶ್, ಹಾಗೂ ಗ್ರಾಮದ ಮುಖಂಡರು, ಶಾಲೆಯ ಶಿಕ್ಷಕರು, ಯುವಕರು ವಿದ್ಯಾರ್ಥಿ ವಿದ್ಯಾರ್ಥಿನಿಯರು, ಹಾಗೂ ಇನ್ನಿತರರು ಹಾಜರಿದ್ದರು.

# ದುರ್ಗದ ಪಾಳೇಗಾರರ ಸೇವೆ ಹಾಗೂ ತ್ಯಾಗ ಸರ್ವಕಾಲಕ್ಕೂ ಆದರ್ಶಮಯ: ಟಿ.ರಘುಮೂರ್ತಿ

» ಚಳ್ಳಕೆರೆ






ನೂರಾರು ವರ್ಷಗಳಿಂದ ಹಿಂದೆ ಕರ್ನಾಟಕ ರಾಜ್ಯದಲ್ಲಿ ಅನೇಕ ಸಂಸ್ಥಾನಗಳ ರಾಜರು ಉತ್ತಮ ಆಡಳಿತ ನಡೆಸಿ ಜನರಿಗೆ ರಕ್ಷಣೆ ನೀಡಿದ್ದರು. ವಿಜಯನಗರ, ಮೈಸೂರು, ಶ್ರೀರಂಗಪಟ್ಟಣ,ಚಿತ್ರದುರ್ಗ ಸಂಸ್ಥಾನಗಳೂ ಸೇರಿದಂತೆ ಮೌರ್ಯರು, ಶಾತವಾಹನರು, ಬನವಾಸಿಕಂದಬರು ಮುಂತಾದವರು ರಾಜ್ಯವನ್ನು ಆಳಿದ ಮಹಾರಾಜರ ಸಂತತಿಯಾಗಿದೆ. ವಿಶೇಷವಾಗಿ ಚಿತ್ರದುರ್ಗ ಸಂಸ್ಥಾನದಲ್ಲಿ ಜನರಿಗೆ ಆಡಳಿತದ ಜೊತೆಗೆ ರಕ್ಷಣೆಯನ್ನು ಒದಗಿಸಿದಲ್ಲದೆ, ಪ್ರಜೆಗಳ ಯೋಗಕ್ಷೇಮಕ್ಕಾಗಿ ಪ್ರಾಣ ತ್ಯಾಗಮಾಡಿದ ಮಹಾರಾಜರ ಸಾಲಿನಲ್ಲಿ ಚಿತ್ರದುರ್ಗದ ವೀರಮದಕರಿನಾಯಕರು ಮೊದಲಸ್ಥಾನದಲ್ಲಿದ್ದಾರೆ. ಅವರ ಸಂಸ್ಥಾನದಲ್ಲಿ ಆರಂಭವಾದ ಪಾಳೇಗಾರರ ಆಡಳಿತ ವೈಖರಿ ಇಂದಿಗೂ ನಮ್ಮ ಅಂತರಂಗದಲ್ಲಿ ಹೊಸ ಆತ್ಮವಿಶ್ವಾಸವನ್ನು ಹುಟ್ಟುಹಾಕುತ್ತದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ಸಾಣಿಕೆರೆ ಗ್ರಾಮದ ಮಾರುತಿ ಪ್ರೌಢಶಾಲೆ ಆವರಣದಲ್ಲಿ ಹಿರಿಯ ಪತ್ರಕರ್ತ ಸೊಂಡೆಕೆರೆ ಶಿವಣ್ಣ ಬಳಗ ಹಮ್ಮಿಕೊಂಡಿದ್ದ 12ನೇ ವರ್ಷದ 77 ಪಾಳೇಗಾರರ ನೆನಪಿನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಚಿತ್ರದುರ್ಗದ ರಾಜ ವೀರಮದಕರಿನಾಯಕ ಆಸ್ಥಾನದ ದೇವತೆಗಳಾದ ಶ್ರೀಉಚ್ಚಂಗಿಯಲ್ಲಮ್ಮ, ಶ್ರೀಏಕನಾಥೇಶ್ವರಿಯವರ ಆಶೀರ್ವಾದದಿಂದ ಹಲವಾರು ವರ್ಷಗಳ ಕಾಲ ಆಡಳಿತ ನಡೆಸಿದರು. ನಂತರ ಕುತಂತ್ರಕ್ಕೆ ಬಲಿಯಾಗಿ ಮದಕರಿನಾಯಕರು ಪ್ರಾಣತ್ಯಾಗ ಮಾಡಿದರು. ಪಾಳೇಗಾರರ ಸಂತತಿ ಅಂದು ನಡೆಸಿದ ಅನೇಕ ದಿಟ್ಟಹೋರಾಟ ನಾಡನ್ನು ರಕ್ಷಿಸುವ ಅವರ ಜವಾಬ್ದಾರಿ ಇಂದಿಗೂ ನಮ್ಮೆಲ್ಲರಿಗೂ ಮಾರ್ಗದರ್ಶನವಾಗಿದೆ ಎಂದರು.

ಹಿರಿಯ ಸಾಹಿತಿ, ಪತ್ರಕರ್ತ ಬಿ.ತಿಪ್ಪಣ್ಣಮರಿಕುಂಟೆ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಪಾಳೇಗಾರರ ಹೆಸರು ಕೇಳಿದರೆ ಕೆಲವರಲ್ಲಿ ಆಶ್ಚರ್ಯ ಉಂಟಾಗುತ್ತದೆ. ಇತಿಹಾಸವನ್ನು ಓದಿದಾಗ ವಿಶೇಷವಾಗಿ ಚಿತ್ರದುರ್ಗದ ವೀರಮದಕರಿನಾಯಕರ ಆಳ್ವಿಕೆಯ ಬಗ್ಗೆ ಮಾಹಿತಿ ಪಡೆದರೆ ಮಾತ್ರ ಪಾಳೇಗಾರರು ಯಾರು ಮತ್ತು ಅವರು ನಾಡಿಗೆ ಸಲ್ಲಿಸಿದ ಸೇವೆಯ ಬಗ್ಗೆ ನಮಗೆ ಮನವರಿಗೆಯಾಗುತ್ತದೆ. ನೂರಾರು ವರ್ಷಗಳ ನಂತರವೂ ಈ ಸಮುದಾಯದ ಹಿರಿಯ ಮುಖಂಡ ಸೊಂಡೆಕೆರೆಶಿವಣ್ಣ 77 ಪಾಳೇಗಾರರ ನೆನಪಿನೋತ್ಸವ ಹಮ್ಮಿಕೊಳ್ಳುವ ಮೂಲಕ ಮತ್ತೊಮ್ಮೆ ನಮ್ಮೆಲ್ಲರನ್ನೂಮಹಾರಾಜರಆಡಳಿತವನ್ನು ನೆನಪು ಮಾಡಿಸುತ್ತದೆ. ನಾಡು, ನುಡಿ, ಸಂಸ್ಕೃತಿಗಾಗಿ 77ಪಾಳೇಗಾರ ವಂಶಸ್ಥರು ಎಂದೂ ಮರೆಯಲಾಗದ ಸೇವೆಯನ್ನು ಮಾಡಿದ್ದು, ಅವರ ಹಾದಿಯಲ್ಲಿ ನಾವೆಲ್ಲರೂ ಮುನ್ನಡೆಯೋಣವೆಂದರು.

ಕಾರ್ಯಕ್ರಮದ ದಿವ್ಯಸಾನಿಧ್ಯವಹಿಸಿದ್ದ ಶಿಡ್ಲಕೋಣೆ ಮಹರ್ಷಿ ವಾಲ್ಮೀಕಿ ಗುರುಪೀಠದ ಸಂಜಯಕುಮಾರನಂದ ಾಮಹಾಸ್ವಾಮಿ ಮಾತನಾಡಿ, ಧೈರ್ಯ, ಸಾಹಸ, ಶೌರ್ಯಕ್ಕೆ ಮತ್ತೊಂದು ಹೆಸರೇ ಮದಕರಿನಾಯಕರು. ಮದಕರಿ ಎಂದರೆ ಒಂದು ದೈತವಾದ ಶಕ್ತಿ, ರಾಜವೀರಮದಕರಿನಾಯಕರು ಪ್ರತಿಯೊಂದು ಸಂದರ್ಭದಲ್ಲೂ ತಮ್ಮ ಪ್ರಜೆಗಳ ರಕ್ಷಣೆಗಾಗಿ ಡೊಂಕಕಟ್ಟಿ ನಿಂತವರು. ಯಾವುದೇ ವೈರಿ ಚಿತ್ರದುರ್ಗದ ಕೋಟೆಯನ್ನು ಪ್ರವೇಶಿಸಿದಂತೆ ಏಳು ಸುತ್ತಿನಕೋಟೆಯನ್ನು ನಿರ್ಮಿಸುವ ಮೂಲಕ ಇಂದಿಗೂ ಜನರ ಮನದಲ್ಲಿ ಶಾಶ್ವತವಾಗಿ ಉಳಿಸಿದ್ದಾರೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸೊಂಡೆಕೆರೆ ಶಿವಣ್ಣ ಮಾತನಾಡಿ, 12ನೇ ವರ್ಷದ 77 ಪಾಳೇಗಾರರ ನೆನಪಿನೋತ್ಸವ ಕಾರ್ಯಕ್ರಮ ಇದಾಗಿದೆ. ಚಿತ್ರದುರ್ಗ, ಹಾಗಲವಾಡಿ,ಜರಿಮಲೆ,ಮೊಳಕಾಲ್ಮೂರು, ಕುಂದರ್ಪಿ, ಗುಮ್ಮನಾಯಕನಹಳ್ಳಿ ಮತ್ತು ನಾಯಕನಹಟ್ಟಿ ಪ್ರಾಂತಗಳಲ್ಲಿ ಇಂದಿಗೂ ಪಾಳೇಗಾರರ ವಂಶಸ್ಥರು ಇದ್ದಾರೆ. ತಮ್ಮ ಹಿರಿಯರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ಅವರು ನಡೆಯುತ್ತಿದ್ದಾರೆ. 77 ಪಾಳೇಗಾರರ ಸಂಪೂರ್ಣ ಮಾಹಿತಿ ಶಾಶ್ವತವಾಗಿರಬೇಕಾದರೆ ಈ ಬಗ್ಗೆ ಇನ್ನೂ ಹೆಚ್ಚಿನ ಸಂಶೋಧನೆ ನಡೆಸಬೇಕಿದೆ. ಕಾರಣ, ಇತಿಹಾಸ ಎಂದಿಗೂ ಇವರನ್ನು ಮರೆಯಲು ಸಾಧ್ಯವಿಲ್ಲ. ಜನರೂ ಸಹ ಪಾಳೇಗಾರರ ಸೇವೆಯನ್ನು ಮರೆಯಲು ಸಾಧ್ಯವಿಲ್ಲ ಎಂದರು.

ಕಾರ್ಯಕ್ರಮದಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ, ರಾಜ್ಯೋತ್ಸವ ಪ್ರಶಸ್ತಿ ವಿಜೇತ ಪಿ.ತಿಪ್ಪೇಸ್ವಾಮಿ, ಕೆಪಿಸಿಸಿ ಜಿಲ್ಲಾಧ್ಯಕ್ಷ ತಾಜ್‌ಪೀರ್, ಸಿ.ಟಿ.ವೀರೇಶ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ನೇರಲಗುಂಟೆರಾಮಪ್ಪ, ಡಾ.ಪಾಲಾಕ್ಷ, ಡಾ.ಮಂಜಪ್ಪ,ಡಾ.ಡಿ.ಎನ್.ಮಂಜುನಾಥ, ಸೂರನಾಯಕ, ಎಲ್‌ಐಸಿ ತಿಪ್ಪೇಸ್ವಾಮಿ, ನಾಗರಾಜು, ದುಗ್ಗಾವರತಿಪ್ಪೇಸ್ವಾಮಿ, ಎಂ.ಚೇತನ್‌ಕುಮಾರ್ ಉಪಸ್ಥಿತರಿದ್ದರು.

# ರಾಮನ ಆದರ್ಶ ಗುಣಗಳು ಪ್ರಪಂಚದಲ್ಲೆಡೆ ಪಸರಿಸಲಿ

» ಹೊಸದುರ್ಗ



ಭಾರತೀಯರ ಆರಾಧ್ಯ ದೈವ ಪ್ರಭು ಶ್ರೀ ರಾಮನ ಆದರ್ಶ ಗುಣಗಳು ಪ್ರಪಂಚದ ಮೂಲೆ ಮೂಲೆಗೂ ತಲುಪಿಸುವ ಕೆಲಸವನ್ನು ನಾವು ನೀವೆಲ್ಲರೂ ಮಾಡಬೇಕಿದೆ ಎಂದು ನೊಣವಿನಕೆರೆ ಕಾಡುಸಿದ್ದೇಶ್ವರ ಮಠದ ಕರಿವೃಷಭ ದೇಶಿಕೇಂದ್ರಶ್ರೀಗಳು ತಿಳಿಸಿದರು.

ನಗರದ ಕಲ್ಮಟ್ ಕುಟೀರದಲ್ಲಿ ನಡೆದ ಧಾರ್ಮಿಕ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಆಶೀರ್ವಚನ ನೀಡಿದ ಅವರು ತಂದೆ ತಾಯಿಯನ್ನ ಮಕ್ಕಳು ಪ್ರೀತಿಸುವುದು, ಗುರು ಹಿರಿಯರನ್ನ ಗೌರವಿಸುವುದು, ಮನೆಯ ಎಲ್ಲಾ ಸದಸ್ಯರು ನೆಮ್ಮದಿಯ ಬದುಕು ಕಟ್ಟಿಕೊಳ್ಳುವುದು, ಈ ಮೂಲಕ ತನ್ನನ್ನ ಸಮಾಜಮುಖಿ ಕಾರ್ಯಗಳಿಗೆ ತೊಡಗಿಸಿಕೊಳ್ಳುವುದು ಮುಂತಾದವುಗಳೇ ಪ್ರಭು ಶ್ರೀ ರಾಮನ ಆದರ್ಶ ಗುಣಗಳು. ಈ ಆಚರಣೆಗಳನ್ನು ಮಾನವ ಜನ್ಮದಲ್ಲಿ ಹುಟ್ಟಿದ ನಾವುಗಳು ಜಾತಿ ಧರ್ಮಗಳ ಎಲ್ಲೆಯನ್ನ ಮೀರಿ ಭ್ರಾತೃತ್ವದ ಬದುಕನ್ನ ಕಟ್ಟಿಕೊಂಡಾಗ ನಿಜವಾಗಿಯೂ ರಾಮನ ಆದರ್ಶ ಗುಣಗಳಿಗೆ ಸಾತ್ವಿಕ ಮೌಲ್ಯ ಸಿಗುತ್ತದೆ.

ರಾಮನ ಗುಣಗಳನ್ನು ಎಲ್ಲಾ ಧರ್ಮದಲ್ಲಿಯೂ ಬಂದಂತಹ ಧರ್ಮಗಳು ಎಂದು ತಿಳಿಸಿದ್ದಾರೆ. ಮೊದಲು ನಾವು ಕಾಯಕಯೋಗಿಗಳಾಗಿ ನಮ್ಮ ಕಾಯಕದಲ್ಲಿ ಕೈಲಾಸವನ್ನು ಕಾಣಬೇಕು ಬಸವಾದಿ ಶರಣರು ಕಾಯಕವನ್ನ ನಂಬಿ ಬದುಕಿದವರು. ಇಂತಹ ಗುಣಗಳನ್ನು ಪ್ರಸ್ತುತ ದಿನಗಳಲ್ಲಿ ಶಾಲಾ ಮಕ್ಕಳಲ್ಲಿ ಕಲಿಸಬೇಕಿದೆ ಆಗ ಮಾತ್ರ ಸುಖಿ ಶ್ರೀ ರಾಮ ರಾಜ್ಯ ನಿರ್ಮಾಣವಾಗುವುದು ಎಂದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕ ಕೆ ಎಸ್ ಕಲ್ಮಠ, ಮಲ್ಲಪ್ಪನಹಳ್ಳಿ ಶಿವಸ್ವಾಮಿ , ಅಣ್ಣಪ್ಪಸ್ವಾಮಿ ಕಂಗುವಳ್ಳಿ ಗೂಳಿಹಟ್ಟಿ ಕೃಷ್ಣಮೂರ್ತಿ ತುಂಬಿನಕೆರೆ ಬಸವರಾಜ್ ನಾಗಲಾಂಬಿಕ ಇದ್ದರು.



ಚಿತ್ರದುರ್ಗ ಕೆ ಎಸ್ ಆರ್ ಟಿ ಸಿ ಚಾಲಕ ಮತ್ತು ನಿರ್ವಾಹಕರಿಗೆ ಲಕ್ಷ್ಮಿ ಸಾಗರ ಗ್ರಾಮಕ್ಕೆ ಪ್ರತಿನಿತ್ಯ ಉತ್ತಮ ಸೇವೆ ಸಲ್ಲಿಸಿದ್ದಕ್ಕಾಗಿ ಗ್ರಾಮದಲ್ಲಿ 75ನೇ ಗಣರಾಜ್ಯೋತ್ಸವದ ಸಮಾರಂಭದ ಗ್ರಾಮ ಪಂಚಾಯತಿ ಅಧ್ಯಕ್ಷರು ಉಪಾಧ್ಯಕ್ಷರು ಸರ್ವ ಸದಸ್ಯರುಗ್ರಾಮದ ಗ್ರಾಮಸ್ಥರು ಸನ್ಮಾನಿಸಲಾಯಿತು

# ಸಾಹಿತಿಗಳ ಕಡೆಗಣನೆಗೆ ಕಸಾಪ ವಿರುದ್ಧ ಬೇಸರ: ಮಂಜುನಾಥ್

» ಹೊಸದುರ್ಗ



ತಾಲ್ಲೂಕಿನ ಸಾಣೇಹಳ್ಳಿ ಶ್ರೀಮಠದಲ್ಲಿ ಫೆ.2ಮತ್ತು 3ರಂದು ನಡೆಯುವ ಪ್ರಥಮ ಅಂತರ ಜಿಲ್ಲಾ ಸಾಹಿತ್ಯ ಸಮ್ಮೇಳನದ ಆಹ್ವಾನ ಪತ್ರಿಕೆಯಲ್ಲಿ ಸಾಹಿತ್ಯದ ಗಂಧ–ಗಾಳಿ ತಿಳಿಯದ ವ್ಯಕ್ತಿಗಳ ಹೆಸರುಗಳನ್ನು ಮುದ್ರಿಸಿರುವುದಕ್ಕೆ ಇಲ್ಲಿನ ಸಾಹಿತ್ಯ ಅಭಿಮಾನಿಗಳಲ್ಲಿ ತೀರ್ವ ಬೇಸರ ಉಂಟುಮಾಡಿದೆ ಎಂದು ಕಸಾಪ ಮಾಜಿ ಕಾರ್ಯದರ್ಶಿ ಮತ್ತು ಪತ್ರಕರ್ತ ನಾಗತಿಹಳ್ಳಿ ಮಂಜುನಾಥ್ ಎಂದು ಹೇಳಿದರು.

ಹೌದು,, ಇದೇ ಪ್ರಥಮವಾಗಿ ಚಿತ್ರದುರ್ಗ ಮತ್ತುಚಿಕ್ಕಮಗಳೂರು ಜಿಲ್ಲೆಯ ಸಾಹಿತ್ಯಾಭಿಮಾನಿಗಳಿಗಾಗಿ ಆಯೋಜನೆಗೊಂಡಿರುವ ಕಾರ್ಯಕ್ರಮದ ಆಹ್ವಾನಪತ್ರಿಕೆಯಲ್ಲಿಹೊಸದುರ್ಗ ತಾಲ್ಲೂಕಿನ ಅರ್ಹರಲ್ಲದ ಹಾಗೂ ಸಂಬಂಧಪಡದ ವ್ಯಕ್ತಿಗಳ ಹೆಸರು ಹಾಕಿಸಿದ್ದು, ಅಂದು ನಡೆಯುವ ಕಾರ್ಯಕ್ರಮ ಅಪಹಾಸ್ಯಕ್ಕೀಡಾಗುವುದು ಖಚಿತ ಎಂದು ತಾಲ್ಲೂಕು ಸಾಹಿತ್ಯಭಿಮಾನಿಗಳ ವಲಯಗಳಲ್ಲಿ ಕೇಳಿ ಬರುತ್ತಿವೆ.

ಈ ಕಾರ್ಯಕ್ರಮದಲ್ಲಿ ತಾಲ್ಲೂಕಿನ ಪೂರ್ಣಪ್ರಮಾಣದ ಜವಾಬ್ದಾರಿ ಇಲ್ಲಿನ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ.ಪಿ ಓಂಕಾರಪ್ಪನವರದ್ದು. ಆದರೆ ಇವರ ಏಕಪಕ್ಷೀಯ ನಿರ್ಧಾರಕ್ಕೆ ಸಾಹಿತ್ಯಕ್ಕೆ ಮತ್ತು ನಿಜವಾದ ಸಾಹಿತಿಗಳಿಗೆ ಮಾಡಿದ ಅವಮಾನ ಎಂದು ಬೇಸರ ವ್ಯಕ್ತಪಡಿಸಿದರು.

ತಾಲ್ಲೂಕಿನಲ್ಲಿ ಸಾಹಿತಿಗಳು, ಕವಿಗಳ ದಂಡೆ ಇದೆ. ಆದರೆ ಅರ್ಹರಲ್ಲದ ವ್ಯಕ್ತಿಗಳ ಹೆಸರು ಹಾಕುವುದರ ಮೂಲಕ ಯೋಗ್ಯರಿಗೆ ಅವಕಾಶ ತಿರಸ್ಕರಿಸಲಾಗಿದೆ. ಅಷ್ಟೇಯಲ್ಲದೇ ತಾಲ್ಲೂಕಿನಲ್ಲಿ ಕಸಾಪ ವತಿಯಿಂದ ಯಾವುದೇ ಕಾರ್ಯಕ್ರಮ ನಡೆಯಲಿ ಅದಕ್ಕೆ ಬೇಕಾಗುವ ಹಣವನ್ನು ಚಂದ ಎತ್ತಿ ಕಾರ್ಯಕ್ರಮ ಮಾಡುತ್ತಾರೆ. ಇದರಿಂದ ಸಾಹಿತ್ಯ ಕ್ಷೇತ್ರಕ್ಕೆ ಅಪಮಾನ ಮಾಡುತ್ತಿದ್ದಾರೆ. ಕಸಾಪ ಅಧ್ಯಕ್ಷ ಬಿ.ಪಿ ಓಂಕಾರಪ್ಪನವರ ಇಂತಹ ತಪ್ಪು ಧೋರಣೆಗಳಿಗೆ ತಾಲ್ಲೂಕಿನ ಸಾಹಿತ್ಯ ಅಭಿಮಾನಿಗಳು ಬೇಸರವಾಗಿದೆ ಎಂದು ತಿಳಿಸಿದರು. ಜಾತಿ ಭೇದವಿಲ್ಲದೆ ಸಾಹಿತ್ಯ, ಸಂಗೀತ, ಸಂಸ್ಕೃತಿಗಳಿಗೆ ಕೊಡುಗೆ ನೀಡುವ ವ್ಯಕ್ತಿತ್ವಗಳನ್ನೆ ಅಧ್ಯಕ್ಷರನ್ನಾಗಿ ನೇಮಿಸುವುದು ಸಮಾನತೆಯ ಸಂಕೇತ. ಆದರೆ ಚಿತ್ರದುರ್ಗ ಜಿಲ್ಲಾಧ್ಯಕ್ಷ ಕೆ.ಎಂ.ಶಿವಸ್ವಾಮಿ ಮತ್ತು ಬಿ.ಪಿ ಓಂಕಾರಪ್ಪ ಒಂದೇ ಜಾತಿ ಆಗಿರುವುದರಿಂದ ಓಂಕಾರಪ್ಪ ಅಧ್ಯಕ್ಷರಾದರು. ಈ ರೀತಿ ಜಾತಿ ಪ್ರೇಮದಿಂದ ತಾಲ್ಲೂಕಿನಲ್ಲಿ ಸಾಹಿತ್ಯ ಪ್ರೇಮವೂ ಕೂಡ ಬಡವಾಗಿದೆ.

## ಪ್ರಮುಖ ಸುದ್ದಿ

# ದೇಶದ ಪ್ರಗತಿಗೆ ಯುವ ಸಮೂಹದ ವಿಶಿಷ್ಟ ಕೊಡುಗೆ ಅಗತ್ಯ

» ಚಿತ್ರದುರ್ಗ



ಯುವಸಮುದಾಯ ನಮ್ಮ ಸಂವಿಧಾನದ ಮೌಲ್ಯಗಳನ್ನು ಹಿಡಿದಿಟ್ಟುಕೊಳ್ಳಬೇಕು ಮತ್ತು ನಮ್ಮ ದೇಶದ ಪ್ರಗತಿಗೆ ವಿಶಿಷ್ಟ ಕೊಡುಗೆ ನೀಡಬೇಕು. ಯುವಕರು ನಮ್ಮ ದೇಶದ ಶ್ರೀಮಂತ ಪರಂಪರೆಯನ್ನು ಮರೆಯಬಾರದು ಮತ್ತು ಭಾರತ ರಾಷ್ಟ್ರದ ಭಾಗವಾಗಿರುವುದಕ್ಕೆ ಹೆಮ್ಮೆ ಪಡಬೇಕೆಂದು ಭೋವಿ ಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ಹೇಳಿದರು.

ನಗರದ ಹೊರಹೊಲಯದಲ್ಲಿರುವ ಶ್ರೀ ಜಗದ್ಗುರು ಸಿದ್ಧರಾಮೇಶ್ವರ ಮಹಾಸಂಸ್ಥಾನ, ಭೋವಿ ಗುರುಪೀಠದ ಆವರಣದಲ್ಲಿರುವ ಎಸ್.ಜೆ.ಎಸ್ ಸಮೂಹ ಸಂಸ್ಥೆಗಳಿದ ಹಮ್ಮಿಕೊಂಡಿದ್ದ ಗಣರಾಜ್ಯೋತ್ಸವದ ಧ್ವಜಾರೋಹಣ ನೇರವೇರಿಸಿ ಮಾತನಾಡಿದ ಶ್ರೀಗಳು,

ನಮ್ಮ ದೇಶದ ಸರ್ವಾಂಗೀಣ ಪ್ರಗತಿಗಾಗಿ ಕೆಲಸ ಮಾಡುವಾಗ, ನಮ್ಮ ರಾಷ್ಟ್ರಕ್ಕಾಗಿ ತ್ಯಾಗ ಮಾಡಿದ ಅನೇಕ ನಾಯಕರನ್ನು ನೆನಪಿಸಿಕೊಂಡು ಮುಂದಿನ ಹೆಜ್ಜೆಯನ್ನು ಎಚ್ಚರಿಕೆಯಿಂದ ಇಡಬೇಕು. ನಮ್ಮ ರಾಷ್ಟ್ರವನ್ನು ರಕ್ಷಿಸಲು ಮತ್ತು ಹೆಮ್ಮೆಪಡುವಂತೆ ಮಾಡಲು ಸಂವಿಧಾನ ಆಶಯಗಳನ್ನು ಮೈಗೂಡಿಸಿಕೊಳ್ಳುವ ಪ್ರತಿಜ್ಞೆ ಮಾಡಬೇಕು.

ಇಂದು ಪ್ರತಿಯೊಬ್ಬ ಯುವಕರು ತಮ್ಮ ಹಕ್ಕುಗಳು ಏನೆಂದು ತಿಳಿಯಲು ಬಯಸುತ್ತಾರೆ, ಸಂವಿದಾನ ಅಧ್ಯಯನ ಮಾಡಿದರೆ, ಕರ್ತವ್ಯಗಳನ್ನು ನಿರ್ವಹಿಸಲು ಕಲಿತು ಸ್ವಯಂಚಾಲಿತವಾಗಿ ತನ್ನ ಹಕ್ಕುಗಳನ್ನು ಚಲಾಯಿಸುತ್ತಾರೆ.

ದೇಶಕ್ಕೆ ಸಂವಿಧಾನ ಸಮರ್ಪಣೆ ಹಾಗೂ ಗಣರಾಜ್ಯೋತ್ಸವ ದಿನವಾದ ಜ.26 ದೇಶದ ಜನರಿಗೆ ನಿಜವಾದ ಸಮಾನತೆ ಸಿಕ್ಕ ದಿನವಾಗಿದ್ದು, ಸಂವಿಧಾನದ ಮೂಲಕ ಅಂಬೇಡ್ಕರ್ ಪ್ರತಿಯೊಬ್ಬರಿಗೂ ಮೂಲಭೂತ ಹಕ್ಕುಗಳ ನೀಡುವ ಮೂಲಕ ಭದ್ರ ಬುನಾದಿ ಹಾಕಿದ್ದಾರೆ.

ಸಂವಿಧಾನವು ಭಾರತದ ನಾಗರೀಕರಿಗೆ ನ್ಯಾಯ, ಸ್ವಾತಂತ್ರ್ಯ ಹಾಗೂ ಸಮಾನತೆಯ ಅವಕಾಶವನ್ನು ಒದಗಿಸುವುದರೊಂದಿಗೆ, ದೇಶದ ಸಮಗ್ರತೆ, ಏಕತೆಯನ್ನು ಕಾಪಾಡುವ ಜೊತೆಗೆ ಸ್ವಾಭಿಮಾನದ ಜೀವನ ಒದಗಿಸುವ ಧ್ಯೇಯವನ್ನು ಹೊಂದಿದೆ. ಆ ಮೂಲಕ ನಾಗರೀಕರು ತಮ್ಮ ಏಳಿಗೆಯೊಂದಿಗೆ ರಾಷ್ಟ್ರದ ಅಭಿವೃದ್ಧಿಗೆ ಕೊಡುಗೆ ನೀಡಲು ಅವಕಾಶ ಕಲ್ಪಿಸಿದೆ. ಸಂವಿಧಾನದ ಈ ಆಶಯಗಳನ್ನು ಸಾಕಾರಗೊಳಿಸಲು ಪ್ರತಿಯೊಬ್ಬರು ಶ್ರಮಿಸಬೇಕು.ಡಾ.ಬಿ.ಆರ್. ಅಂಬೇಡ್ಕರ್ ಮತ್ತು ಅವರ ತಂಡದ ಸದಸ್ಯರ ದೂರದೃಷ್ಟಿಯ ಪರಿಣಾಮನಮ್ಮ ಅದ್ಭುತ ಸಂವಿಧಾನದಡಿಯಲ್ಲಿ ಸಮಬಾಳು ಸಮಪಾಲಿನ ದಿನಗಳನ್ನು ಕಾದು ನೋಡುವ ಆಶಭಾವನೆ ಇದೆ. ಸಂವಿಧಾನ ಶಿಲ್ಪಿ ಡಾ ಬಾಬಾ ಸಹೇಬ್ ಅಂಬೇಡ್ಕರ್ ಅವರ ಪ್ರಗತಿಯ ದಾರಿಯಲ್ಲಿ ನಡೆಯುವುದಕ್ಕೆ ದಾರಿದೀಪವಾಗಿದ್ದಾರೆ.

ಯುಗಯುಗಾಂತರಗಳಿಂದ ಮಾನವೀಯತೆ ನೆಲೆಸಿರುವ ರಾಷ್ಟ್ರ ನಮ್ಮ ಭಾರತ. ಇದು ವಿಭಿನ್ನ ಧರ್ಮ, ಸಮಾಜ, ಸಂಸ್ಕೃತಿ ಮತ್ತುಭಾಷೆಗಳಿಂದಆಶೀರ್ವದಿಸಲ್ಪಟ್ಟಿರುವ ದೇಶವಾಗಿದೆ, ಎಲ್ಲವೂ ಪರಸ್ಪರ ಸೌಹಾರ್ದತೆಯಿಂದ ಪರಸ್ಪರ ಸಂಬಂಧ ಹೊಂದಿದೆ. ಇಡೀ ಜಗತ್ತಿಗೆ ವಿವಿಧತೆಯಲ್ಲಿ ಏಕತೆ ಎಂಬ ಸಂದೇಶವನ್ನು ನೀಡುವ ಎಲ್ಲರ ನಡುವೆ ನಾವು ಶಾಂತಿ ಮತ್ತು ಸಾಮರಸ್ಯವನ್ನು ಸ್ಥಾಪಿಸಬೇಕು ಮತ್ತು ನಮ್ಮ ರಾಷ್ಟ್ರೀಯ ಏಕತೆಯ ಬಲವರ್ಧನೆ ಮತ್ತು ಐಕ್ಯಮತ್ಯಕ್ಕಾಗಿ ನಾವು ಶ್ರಮಿಸಬೇಕು ಹೇಳಿದರು.

ಸಮಾರಂಭದಲ್ಲಿ ರಾಮಕೃಷ್ಣ ಪ್ರೌಢಶಾಲೆಯ ಮುಖ್ಯೋಪಧ್ಯಾಯರಾದ ಶ್ರೀಧರ, ಶಾರದ ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಧ್ಯಾಯರಾದ ಹನುಮಂತಪ್ಪ, ಸಿದ್ಧರಾಮೇಶ್ವರ ಪ್ರೌಢಶಾಲೆಯ ಮುಖ್ಯೋಪಧ್ಯಾಯರಾದ ಜಯಮ್ಮ ಎಸ್.ಜೆ.ಎಸ್ ಆಂಗ್ಲ ಮಾಧ್ಯಮ ಶಾಲೆಯ ಶಿಕ್ಷಕರು ಹಾಗೂ ಸಿಬ್ಬಂದಿ ಒಂಟಿಣಂಡಿಟಿಂ ಉಪಸ್ಥಿತಿಯಿದ್ದರು.

# ಎಲ್ಲಿ ಜೀವನ ನಡೆವುದೋ ಅದೇ

# ನಮ್ಮೂರು.......

## ಯಾರು ಸ್ನೇಹದಿ ಬರುವರೋ ಅವರೇ ನಮ್ಮೋರು...........
## ಒಂದು ಚಿತ್ರ ಗೀತೆಯ ಹಾಡಿನ ಸಾಲುಗಳಿವು........

ಮೊದಲೆಲ್ಲ ಸಾಮಾನ್ಯ ವಾಗಿ ಮನುಷ್ಯ ಅಲೆಮಾರಿಯಾಗಿದ್ದ. ನಂತರ ಒಂದು ಪ್ರದೇಶದಲ್ಲಿ ನೆಲೆ ನಿಂತು ಯಾವುದೋ ಉದ್ಯೋಗ ಮಾಡಿ ಒಂದು ಕಡೆ ಶಾಶ್ವತವಾಗಿ ನೆಲೆನಿಂತ. ಅದು ಎಷ್ಟರಮಟ್ಟಿಗೆ ಎಂದರೆ ಆತನ ಹುಟ್ಟು ಬದುಕು ಸಾವು ಎಲ್ಲವೂ ಒಂದೇ ಪ್ರದೇಶದಲ್ಲಿ ನಡೆಯುತ್ತಿತ್ತು. ಆ ಸ್ಥಳದಿಂದ ಆತ ದೂರ ಸರಿಯುತ್ತಿದ್ದುದು ತೀರಾ ಅಪರೂಪ. ಭಾವನಾತ್ಮಕವಾಗಿ ಆತ ಆ ಪ್ರದೇಶದ ಬಗ್ಗೆ ತುಂಬಾ ಅಭಿಮಾನ ಹೊಂದಿರುತ್ತಿದ್ದ.......

ಯಾವಾಗ ಜನಸಂಖ್ಯೆ ಹೆಚ್ಚಾಗಿ ಬದುಕಿನ ಅನಿವಾರ್ಯತೆಗಾಗಿ ಕೈಗಾರಿಕೀಕರಣ ಮತ್ತು ಅದರಿಂದಾಗಿ ಸೃಷ್ಟಿಯಾದ ನಗರೀಕರಣ ಪ್ರಾರಂಭವಾಯಿತೋ ಆಗ ಮತ್ತೆ ವಲಸೆ ಪ್ರಾರಂಭವಾಗಿ ಆ ಪ್ರದೇಶದ ಭಾವನಾತ್ಮಕ ಸಂಬಂಧ ಸಡಿಲವಾಗತೊಡಗಿತು.......

ತಾತ ಮುತ್ತಾತಂದಿರು ಹುಟ್ಟಿ ಬೆಳೆದ ಊರಿನಿಂದ ಮಕ್ಕಳು, ಮಕ್ಕಳು ಇದ್ದ ಸ್ಥಳದಿಂದ ಮೊಮ್ಮಕ್ಕಳು, ಅಲ್ಲಿಂದ ಮರಿ ಮಕ್ಕಳು ಬೇರೆ ಬೇರೆ ವಾಸ ಸ್ಥಾನಗಳನ್ನು ಹುಡುಕಿಕೊಂಡು ಹೊರಟರು. ನಮ್ಮ ಪೂರ್ವಿಕರ ನಿಜವಾದ ಪ್ರದೇಶಗಳು ಪತ್ತೆ ಹಚ್ಚುವುದೇ ಕಷ್ಟವಾಯಿತು. ಎಲ್ಲೋ ಅಪರೂಪದಲ್ಲಿ ನೂರು ಇನ್ನೂರು ವರ್ಷಗಳಷ್ಟು ದೀರ್ಘಕಾಲ ಒಂದೇ ಸ್ಥಳದಲ್ಲಿ ವಾಸವಾಗಿರುವ ಕೆಲವು ಕುಟುಂಬಗಳು ಉದಾಹರಣೆಗೆ ಸಿಗಬಹುದು........

ಇಂತಹ ಸಂದರ್ಭ ಮತ್ತು ಸನ್ನಿವೇಶದಲ್ಲಿ ಮೇಲಿನ ಸಿನಿಮಾ ಹಾಡು ನೆನಪಾಗುತ್ತದೆ. ಒಂದು ಊರಿನಲ್ಲಿ, ಒಂದೇ ಮನೆಯಲ್ಲಿ ಹತ್ತು ಇಪ್ಪತ್ತು ವರ್ಷ ವಾಸಿಸುವುದೇ ಒಂದು ದೊಡ್ಡ ಸಾಧನೆಯಾಗಿದೆ. ಸ್ವಂತ ಮನೆಯವರು ಆಯ್ಕೆಗಳಿಲ್ಲದೆ ಸ್ವಲ್ಪ ದೀರ್ಘಕಾಲ ಒಂದೇ ಮನೆಯಲ್ಲಿ ಉಳಿಯಬಹುದು. ಬಾಡಿಗೆ ಮನೆಯವರಿಗೆ, ವರ್ಗಾವಣೆ ಇರುವ ಉದ್ಯೋಗ ವ್ಯವಹಾರ ಮಾಡುವವರಿಗೆ, ಹೊಸ ಅವಕಾಶಗಳ ಹುಡುಕಾಟದವರಿಗೆ ಐದು ಹತ್ತು ವರ್ಷಗಳೇ ದೊಡ್ಡ ಸಮಯವಾಗಿರುತ್ತದೆ........

ನಮ್ಮ ಮೂಲ ಬೇರುಗಳು ಸಡಿಲವಾದಂತೆ ಭಾವನಾತ್ಮಕ ಸಂಬಂಧಗಳು ಕಡಿಮೆಯಾಗುತ್ತದೆ.

ಈ ಪ್ರಕ್ರಿಯೆಯ ಮುಂದುವರಿದ ಭಾಗವಾಗಿ ಇದಕ್ಕಿಂತ ಅಪಾಯಕಾರಿಯಾದ ಮನುಷ್ಯ ಸಂಬಂಧಗಳು ಸಡಿಲವಾಗತೊಡಗಿರುವುದು. ಪ್ರತ್ಯೇಕ ವಾಸಸ್ಥಳಗಳು ಮನುಷ್ಯರ ನಡುವಿನ ಗಾಡ ಸಂಬಂಧಗಳನ್ನು ಸಹ ಪ್ರತ್ಯೇಕಿಸಿದೆ. ಅವಿಭಕ್ತ ಕುಟುಂಬಗಳು ಸಣ್ಣ ಕುಟುಂಬಗಳಾಗಿ, ಅವು ಏಕ ಕೋಣೆಯ ಚಿಕ್ಕ ಮನೆಗಳಾಗಿ ಕೊನೆಗೆ ಹಾಸ್ಟೆಲ್ ಮತ್ತು ಪಿ.ಜಿ. ಕೇಂದ್ರಗಳಾಗಿ ರೂಪಾಂತರ ಹೊಂದುತ್ತಿವೆ. ಅಪಾರ್ಟ್ ಮೆಂಟ್ ಸಮುಚ್ಚಯಗಳಲ್ಲಿ ಪ್ರತ್ಯೇಕ ಊರಿನ ಗುಣಲಕ್ಷಣಗಳನ್ನು ಕಾಣುತ್ತಿದ್ದೇವೆ........

ಬದಲಾವಣೆ ಜಗದ ನಿಯಮ. ಅದನ್ನು ಸ್ವೀಕರಿಸಬೇಕು ನಿಜ. ಆದರೆ ಯಾವ ದಿಕ್ಕಿನತ್ತ ಈ ಬದಲಾವಣೆ ಸಾಗುತ್ತಿದೆ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕಲ್ಲವೇ ? ಸರಿ ಸುಮಾರು 60/80 ವರ್ಷಗಳ ಬದುಕಿನ ಬಹಳಷ್ಟು ಸಮಯವನ್ನು ನಮ್ಮ ನಿಯಂತ್ರಣವಿಲ್ಲದೆ, ಊಟ, ವಸತಿ, ವಾಹನಗಳಿಗಾಗಿ ನಮ್ಮ ಇಚ್ಚೆಗೆ ವಿರುದ್ಧವಾಗಿ ಜೀವನದ ಗುಣಮಟ್ಟ ಮತ್ತು ನೆಮ್ಮದಿಯ ಗುಣಮಟ್ಟ ಎರಡನ್ನೂ ಬಲಿಕೊಟ್ಟು ಜೀವಿಸುವುದು ನಮ್ಮ ಹುಟ್ಟನ್ನೇ ಪ್ರಶ್ನಿಸುವಂತೆ ಮಾಡುತ್ತದೆ. ಸಾರ್ಥಕ ಜೀವನ ಅಂದರೆ ಏನು ಎಂಬ ಪ್ರಶ್ನೆ ಕಾಡತೊಡಗುತ್ತದೆ. ಊಟ ವಸತಿಗಾಗಿ ಬದುಕೇ, ಗಂಡ ಹೆಂಡತಿ ಮಕ್ಕಳಿಗಾಗಿ ಬದುಕೇ, ನಮ್ಮ ಆಸಕ್ತಿಯ ಚಟುವಟಿಕೆಗಳಿಗಾಗಿ ಬದುಕೇ, ಏನಾದರೂ ಸಾಧಿಸುವುದು ಬದುಕೇ ಎಂಬ ಆಲೋಚನೆಗಳ ನಡುವೆ ಬದುಕುವುದೇ ಸಾಧನೆಯಾಗುವ ಹಂತಕ್ಕೆ ನಮ್ಮಲ್ಲಿ ಬಹುತೇಕರು ಬಂದು ತಲುಪಿದ್ದಾರೆ..........

ಪರಿಸ್ಥಿತಿ ಹೀಗೇ ಮುಂದುವರಿದರೆ ಮುಖ್ಯವಾಗಿ ಯುವ ಸಮುದಾಯ ಯಂತ್ರ ಮಾನವರಾಗುವ ನಿರ್ಭಾವುಕ ಸ್ಥಿತಿ ತಲುಪಬಹುದು. ಮನೆ, ವಾಹನ, ಶಿಕ್ಷಣ, ಆರೋಗ್ಯ ಇವುಗಳಿಗಾಗಿ ಇರುವ ಹಣಕಾಸಿನ ಬ್ಯಾಂಕಿಂಗ್ ಇಎಂಐ ವ್ಯವಸ್ಥೆ ಅನೇಕ ನಗರ ಪ್ರದೇಶದ ಜನರ ಇಡೀ ಬದುಕನ್ನು ನಿಯಂತ್ರಿಸುತ್ತಿರುವುದನ್ನು ನಾವು ನೋಡುತ್ತಿದ್ದೇವೆ. ಸಾಲದ ಸುತ್ತಲೇ ಜೀವನವನ್ನು ಕಟ್ಟಿಹಾಕಿ ಮಾನವ ಸಂಪನ್ಮೂಲಗಳನ್ನು ತಮ್ಮ ಹಿತಾಸಕ್ತಿಯ ಬಳಕೆಗಾಗಿ ದುಡಿಸಿಕೊಳ್ಳುತ್ತಿರುವ ವರ್ಗದ ಬಗ್ಗೆ ನಾವು ಜಾಗೃತವಾಗಬೇಕಿದೆ. ಕೆಲವೇ ಕೆಲವು ಜನರ ಸುಖಕ್ಕಾಗಿ ಇಡೀ ಸಮೂಹ ದುಡಿಯುವುದು ನಿಜಕ್ಕೂ ದುರಂತ. ಹೋಗಲಿ ಆ ದುಡಿತದಿಂದ ನೆಮ್ಮದಿಯಾದರೂ ಸಿಗುತ್ತಿದೆಯೇ ?....... ಎಲ್ಲರ ಮೇಲೆ ಅಪನಂಬಿಕೆ, ಆತ್ಮಹತ್ಯೆ ಅಪರಾಧ ಅಪಘಾತ ಅನಾರೋಗ್ಯ ಹೆಚ್ಚಳ, ಇದೇ ಒತ್ತಡದ ಕಾರಣದಿಂದ ಹಣದ ಮಹತ್ವ ಹೆಚ್ಚಾಗಿ ಮಾನವಿಯ ಮೌಲ್ಯಗಳ ಕುಸಿತ. ನೆಮ್ಮದಿಗಾಗಿ ಹುಡುಕಾಟ. ಈಗ ನಮ್ಮ ಬದುಕಿನ ದಿಕ್ಕುಗಳನ್ನು ಈ ಎಲ್ಲಾ ಹಿಂದಿನ ಅನುಭವಗಳ ಆಧಾರದಲ್ಲಿ ಮತ್ತೊಂದು ದಿಕ್ಕಿನತ್ತ ಸಾಗಿಸುವ ಪ್ರಯತ್ನ ಮಾಡಬೇಕಿದೆ. ಬದುಕಿನ ಅತ್ಯಮೂಲ್ಯ ಸಮಯವನ್ನು ಒಂದು ಆಹ್ಲಾದಕರ, ಹೆಚ್ಚು ನಗುವಿನಿಂದ ಕೂಡಿದ, ನಮ್ಮ ಆಸಕ್ತಿಯ ವಿಷಯಗಳಲ್ಲಿ ತೊಡಗಿಸಿಕೊಳ್ಳುವ, ಹೆಚ್ಚು ಒತ್ತಡವಿಲ್ಲದ, ಇಎಂಐ ಗಳಲ್ಲಿ ಬಂಧಿಯಾಗದ ಜೀವನ ಶೈಲಿಯನ್ನು ರೂಪಿಸಿಕೊಳ್ಳಬೇಕಿದೆ........

ಸ್ಪರ್ಧೆ ಇರಲಿ ಆದರೆ ಬದುಕೇ ಸ್ಪರ್ಧೆಯಾಗುವುದು ಬೇಡ. ಅದು ಜೂಜಾಟವಾಗುತ್ತದೆ. ಆಗ ಕೆಲವೇ ಕೆಲವು ಜನ ಆ ಜೂಜಾಟದಲ್ಲಿ ಲಾಭ ಮಾಡಿ ಉಳಿದವರು ದಿವಾಳಿಯಾಗುತ್ತಾರೆ. ಹಣದ ದಿವಾಳಿತನವೇ ಬದುಕಿನ ದಿವಾಳಿತನವಾಗುತ್ತದೆ. ನಮಗರಿವಿಲ್ಲದೆ ನಾವು ನಮ್ಮ ಮೇಲಿನ ನಿಯಂತ್ರಣ ಕಳೆದುಕೊಂಡು ಬೇರೆಯವರ ದಾಳವಾಗುತ್ತಿದ್ದೇವೆ. ಜೀತದಾಳುಗಳಾಗುವ ಮುನ್ನ ದಯವಿಟ್ಟು ಎಚ್ಚೆತ್ತುಕೊಳ್ಳಿ.......

ಇರುವುದೊಂದೇ ಬದುಕು. ಅದನ್ನು ಅರ್ಥಪೂರ್ಣವಾಗಿ ಸಾರ್ಥಕ ಪಡಿಸಿಕೊಳ್ಳಿ.........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ

ಸುಧಾರಣೆಯ

ಗುರಿಯೊಂದಿಗೆ,

ಮನಗಳಲ್ಲಿ –


ಮನೆಗಳಲ್ಲಿ – ಮತಗಳಲ್ಲಿ

ಪರಿವರ್ತನೆಗಾಗಿ,

ಮನಸ್ಸುಗಳ ಅಂತರಂಗದ

ಚಳವಳಿ.





ಯಾವಾಗ ಜನಸಂಖ್ಯೆ ಹೆಚ್ಚಾಗಿ ಬದುಕಿನ ಅನಿವಾರ್ಯತೆಗಾಗಿ ಕೈಗಾರಿಕೀಕರಣ ಮತ್ತು ಅದರಿಂದಾಗಿ ಸೃಷ್ಟಿಯಾದ ನಗರೀಕರಣ ಪ್ರಾರಂಭವಾಯಿತೋ ಆಗ ಮತ್ತೆ ವಲಸೆ ಪ್ರಾರಂಭವಾಗಿ ಆ ಪ್ರದೇಶದ ಭಾವನಾತ್ಮಕ ಸಂಬಂಧ ಸಡಿಲವಾಗತೊಡಗಿತು.......

» ಲೇಖನ
ವಿವೇಕಾನಂದ.
ಹೆಚ್.ಕೆ.
9844013068

# ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಉದ್ಘಾಟನೆ

» **ಚಿತ್ರದುರ್ಗ**

ಗ್ರಾಮೀಣ ಭಾಗಕ್ಕೆ ಹೆಚ್ಚು ವಿಜ್ಞಾನ ತಲುಪಬೇಕು ಎಂದು ಇಸ್ರೋ ಹಿರಿಯ ವಿಜ್ಞಾನಿ ಬೆಂಗಳೂರಿನ ಶ್ರೀನಾಥ ರತ್ನಕುಮಾರ ಹೇಳಿದರು.

ವಿದ್ಯಾವಿಕಾಸ ಸಂಸ್ಥೆಯಲ್ಲಿ ಶನಿವಾರ ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಉದ್ಘಾಟಿಸಿ ಮಾತನಾಡಿದರು.

ಯಾವುದು ವಿಜ್ಞಾನ ವಿಷಯ, ಯಾವುದು ಮೌಢ್ಯ, ಯಾವುದು ಮೌಢ್ಯ ಅಲ್ಲ ಎನ್ನುವುದನ್ನು ಮೊದಲು ತಿಳಿದುಕೊಳ್ಳಬೇಕು. ಇಸ್ರೋದಲ್ಲಿ ವಿಜ್ಞಾನಿಗಳನ್ನು ಪ್ರತಿ ವರ್ಷವೂ ನೇಮಕ ಮಾಡಿಕೊಳ್ಳಲಾಗುವುದು. 196 ಖಾಸಗಿ ಸಂಸ್ಥೆಗಳು ಹುಟ್ಟಿಕೊಂಡಿವೆ. ಉಪಗ್ರಹ, ರಾಕೆಟ್ ತಯಾರು ಮಾಡುತ್ತಿದೆ. ವಿಜ್ಞಾನ ಎಲ್ಲರಿಗೂ ಉಪಯೋಗವಾಗುವುದಲ್ಲದೆ ವೈಚಾರಿಕತೆಯನ್ನು ತಿಳಿಸಿ ಕೊಡುತ್ತದೆ ಎಂದು ವಿಜ್ಞಾನದ ಮಹತ್ವ ತಿಳಿಸಿದರು.



ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ವಿಜ್ಞಾನ ಕ್ಷೇತ್ರಕ್ಕೆ ನುಗ್ಗಬೇಕು. ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಯಶಸ್ವಿಯಾಗಲಿ. ಅದಕ್ಕೆ ನನ್ನ ಸಹಕಾರವಿದೆ. 75 ವರ್ಷದಲ್ಲಿ ವಿಜ್ಞಾನ ನಗರ ಪ್ರದೇಶದಿಂದ ಗ್ರಾಮೀಣ ಭಾಗಕ್ಕೆ ಹೊರಳುತ್ತಿದೆ. ಚಳ್ಳಕೆರೆ ಸಮೀಪ ಹಳ್ಳಿಯಲ್ಲಿ ಇಸ್ರೋ ಇದೆ. ಚಂದ್ರಯಾನ–2, ಚಂದ್ರಯಾನ–3 ಯಶಸ್ವಿಗೆ ಕೊಡುಗೆ ಕೊಟ್ಟಿದೆ ಎನ್ನುವುದು ಯಾರಿಗೂ ಗೊತ್ತಿಲ್ಲ. ಬೆಂಗಳೂರಿನ ಸಮೀಪದ ಹೊಸಕೋಟೆಯಲ್ಲಿ ಕುಳಿತು ವಿಜ್ಞಾನದ ದತ್ತಾಂಶಗಳನ್ನು ತೆಗೆದುಕೊಳ್ಳುವಷ್ಟು ವಿಜ್ಞಾನ ಮುಂದುವರೆದಿದೆ ಎಂದರು.

ವೈಜ್ಞಾನಿಕ ಸಾಮಾಜಿಕ ತಿಳುವಳಿಕೆ ಪ್ರತಿಯೊಬ್ಬರಲ್ಲಿಯೂ ಮೂಡಿ ಗ್ರಾಮೀಣ ಜನತೆಯಲ್ಲಿ ವಿಜ್ಞಾನ–ತಂತ್ರಜ್ಞಾನ ಗೊತ್ತಾಗಬೇಕು ಎಂದು ಹಿರಿಯ ವಿಜ್ಞಾನಿ ಶ್ರೀನಾಥ ರತ್ನಕುಮಾರ ನುಡಿದರು.

ಚಿತ್ರದುರ್ಗ ಸೈನ್ಸ್ ಫೌಂಡೇಷನ್‌ನ ಕಾರ್ಯದರ್ಶಿ ಎಚ್.ಎಸ್.ಟಿ.ಸ್ವಾಮಿ ಮಾತನಾಡಿ ಚಿತ್ರದುರ್ಗದಲ್ಲಿ ಈಗಾಗಲೆ ಎಂಟರಿಂದ ಹತ್ತು ವಿಜ್ಞಾನ ಸಂಸ್ಥೆಗಳು ಕೆಲಸ ಮಾಡುತ್ತಿವೆ. ವಿಭಿನ್ನವಾದ ವಿಜ್ಞಾನ ಚಟುವಟಿಕೆಯಲ್ಲಿ ತೊಡಗಿಸಿಕೊಂಡು ಕೆಲಸ ಮಾಡಬೇಕೆಂಬ ಉದ್ದೇಶದಿಂದ ಚಿತ್ರದುರ್ಗ ಸೈನ್ಸ್ ಫೌಂಡೇಷನ್ ಹುಟ್ಟು ಹಾಕಲಾಗಿದೆ. ಏಳು ಜನ ಸಮಾನ ಮನಸ್ಕರು ಸೇರಿ ಕಟ್ಟಿರುವ ಈ ಫೌಂಡೇಷನ್‌ನಿಂದ ವಿಜ್ಞಾನ ಚಟುವಟಿಕೆಗೆ ಹೊಸ ಆಯಾಮ ಕೊಡಬೇಕೆಂಬುದು ನಮ್ಮ ಗುರಿ. ವಿಜ್ಞಾನ ಚಟುವಟಿಕೆಳನ್ನು ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ತಲುಪಿಸಬೇಕು. ಎಲ್ಲರೂ ಸೇರಿ ಹೊಸ ವಿಜ್ಞಾನ ಲೋಕ ಕಟ್ಟೋಣ. ಇದರಲ್ಲಿ ವಿಜ್ಞಾನ ಶಿಕ್ಷಕರುಗಳು ಸದಸ್ಯರಾಗಬಹುದು ಎಂದು ಹೇಳಿದರು.

# ಶಾಸಕ ಟಿ.ರಘುಮೂರ್ತಿಗೆ ಸಚಿವ ಸ್ಥಾನ ಕೊಡಲು ಒತ್ತಾಯ



» **ಚಿತ್ರದುರ್ಗ**

ಚಳ್ಳಕೆರೆ ಕ್ಷೇತ್ರದಿಂದ ಸತತವಾಗಿ ಮೂರನೆ ಬಾರಿಗೆ ಗೆದ್ದು ಅಭಿವೃದ್ಧಿಯ ಹರಿಕಾರ ಎಂದೆ ಹೆಸರುಗಳಿಸಿರುವ ಟಿ.ರಘುಮೂರ್ತಿಗೆ ನಿಗಮ ಮಂಡಳಿ ಸ್ಥಾನಕ್ಕೆ ಬದಲಾಗಿ ಸಚಿವ ಸ್ಥಾನ ನೀಡಬೇಕೆಂದು ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಒತ್ತಾಯಿಸಿದರು. ಪ್ರವಾಸಿ ಮಂದಿರದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು 2018 ರ ಚುನಾವಣೆಯಲ್ಲಿ ಜಿಲ್ಲೆಯ ಆರು ಕ್ಷೇತ್ರಗಳಲ್ಲಿ ಐದು ಕಡೆ ಕಾಂಗ್ರೆಸ್ ಅಧಿಕಾರ ಕಳೆದುಕೊಂಡಾಗ ಚಳ್ಳಕೆರೆಯ ಏಕೈಕ ಶಾಸಕರಾಗಿ ಕಾಂಗ್ರೆಸ್‌ನ ಮರ್ಯಾದೆ ಕಾಪಾಡಿದ ಶಾಸಕ ಟಿ.ರಘುಮೂರ್ತಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಒಲ್ಲದ ಊಟ ಕೊಟ್ಟಿರುವುದು ಯಾವ ನ್ಯಾಯ? ಎಂದು ಪ್ರಶ್ನಿಸಿದ ಕೆ.ಟಿ.ಶಿವಕುಮಾರ್ ಜಿಲ್ಲೆಯ ನಾಡಿಮಿಡಿತ ಗೊತ್ತಿರುವ ಶಾಸಕ ಟಿ.ರಘುಮೂರ್ತಿಗೆ ಸಚಿವ ಸ್ಥಾನ ಸಿಗಬೇಕೆಂದು ಆಗ್ರಹಿಸಿದರು. ಕರುನಾಡ ವಿಜಯ ಸೇನೆ ಮಹಿಳಾ ಘಟಕದ ಅಧ್ಯಕ್ಷೆ ವೀಣಗೌರಣ್ಣ, ಕಾರ್ಯದರ್ಶಿ ಜಗದೀಶ್ ಸಿ. ಪ್ರಧಾನ ಕಾರ್ಯದರ್ಶಿ ಗೋಪಿನಾಥ್ ಎಸ್. ನಗರಾಧ್ಯಕ್ಷ ಅವಿನಾಶ್ ಎಸ್. ರಾಜಣ್ಣ, ಪ್ರದೀಪ, ಹರೀಶ್, ಸುರೇಶ ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T